ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೯೮

**ಪಟ್ಟಿ – ೦೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೆರಡನೆಯ ಅಧಿವೇಶನ**

**ಸೋಮವಾರ, ದಿನಾಂಕ : ೦೭ನೇ ಡಿಸೆಂಬರ್, ೨೦೨೦**

---

## ಸಮೂಹ – I

೧. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು.

೪. ಅರಣ್ಯ ಸಚಿವರು.

೫. ಕಾರ್ಮಿಕ ಮತ್ತು ಸಕ್ಕರೆ ಸಚಿವರು.

೬. ಸಮಾಜ ಕಲ್ಯಾಣ ಸಚಿವರು.

---

## ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧ (೮೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಅದರಲ್ಲಿ ಭರ್ತಿ ಮಾಡಲಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ ?

## ಬೀದರ್ ಜಿಲ್ಲೆಯಲ್ಲಿ ಐಟಿಐ ಕಾಲೇಜುಗಳಿಗೆ ಉಪ ಪ್ರಾಚಾರ್ಯರರನ್ನು ನೇಮಕ ಮಾಡುವ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨ (೮೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಐಟಿಐ ಕಾಲೇಜುಗಳಿಗೆ ಉಪ ಪ್ರಾಚಾರ್ಯರನ್ನು ಜೂನ್ ತಿಂಗಳ ೨೦೨೦ರ ಒಳಗಾಗಿ ನೇಮಕಾತಿ ಮಾಡಲಾಗುವುದೆಂದು ಹಿಂದಿನ ಅಧಿವೇಶನದಲ್ಲಿ ಆಶ್ವಾಸನೆಯನ್ನು ನೀಡಲಾಗಿದ್ದು, ಈ ಪ್ರಕ್ರಿಯೆ ಯಾವ ಹಂತದಲ್ಲಿದೆ; ಅಥವಾ ಇದನ್ನು ಸಾಕಾರಗೊಳಿಸಲಾಗಿದೆಯೇ ;



(ಆ) ಜಿಲ್ಲೆಯಲ್ಲಿ ಎಷ್ಟು ಐಟಿಐ ಕಾಲೇಜುಗಳಿವೆ; ಅವುಗಳಲ್ಲಿ ಎಷ್ಟು ಕಾಲೇಜುಗಳಲ್ಲಿ ಪ್ರಾಚಾರ್ಯರು ಮತ್ತು ಉಪ ಪ್ರಾಚಾರ್ಯರು ಕಾರ್ಯನಿರ್ವಹಿಸುತ್ತಿದ್ದಾರೆ ? (ಸಂಪೂರ್ಣ ಮಾಹಿತಿ ನೀಡುವುದು)

## ಕ್ರೈಸ್ ಸಂಸ್ಥೆಯ ಅಡಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಮಸ್ಯೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೩ (೦೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ (ಡಿ.ಸಿ.ಆರ್.ಜಿ) ಸೌಲಭ್ಯ ನೀಡದಿರುವುದಕ್ಕೆ ಕಾರಣಗಳೇನು ;

(ಆ) ಸದರಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಇ.ಜಿ.ಐ.ಎಸ್. (ಎಂಪ್ಲಾಯ್ ಗ್ರಾಚ್ಯೂಟಿ ಇನ್ಸೂರೆನ್ಸ್ ಸ್ಕೀಮ್) ಮೊತ್ತ ನೀಡಲಾಗುತ್ತಿದೆಯೇ ಈ ಮೊತ್ತದ ಪ್ರಮಾಣ ಎಷ್ಟು ಇಂದಿನವರೆವಿಗೂ ಎಷ್ಟು ಮೃತ ನೌಕರರಿಗೆ ಈ ಸೌಲಭ್ಯ ನೀಡಿದೆ ;

(ಇ) ಸದರಿ ಶಾಲೆಗಳಲ್ಲಿ ಸೇವೆ ಸಲ್ಲಿಸಿ ಇಲ್ಲಿಯವರೆಗೂ ನಿಧನರಾದ ನೌಕರರ ಸಂಖ್ಯೆ ಎಷ್ಟು ; ನಿಧನರಾದ ನೌಕರರ ಕುಟುಂಬಕ್ಕೆ ಸರ್ಕಾರ/ಕ್ರೈಸ್ ಸಂಸ್ಥೆ ನೀಡಿರುವ ಪರಿಹಾರದ ಮೊತ್ತ ಎಷ್ಟು ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ಮತ್ತು ಯಾರು ಯಾರು ; ಅನುಕಂಪದ ಆಧಾರಿತ ಸೇವೆ ನೀಡಿದ ವಿವರಗಳನ್ನು ನೀಡುವುದು ; ನೀಡದೇ ಇದ್ದಲ್ಲಿ, ಕಾರಣಗಳೇನು ;

(ಈ) ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರರಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ; ನೀಡದಿದ್ದಲ್ಲಿ ಕಾರಣಗಳೇನು ? (ಸಂಪೂರ್ಣ ಮಾಹಿತಿಯೊಂದಿಗೆ ವಿವರವನ್ನು ನೀಡುವುದು)

## ವಿಶ್ವ ವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೪ (೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಇರುವ ವಿಶ್ವ ವಿದ್ಯಾಲಯಗಳ ಸಂಖ್ಯೆ ಎಷ್ಟು ಹಾಗೂ ಯಾವುವು ; (ವಿವರ ನೀಡುವುದು)

(ಆ) ಈ ಎಲ್ಲ ವಿಶ್ವ ವಿದ್ಯಾಲಯಗಳಲ್ಲಿ ಕುಲಪತಿಗಳ ಹಾಗೂ ಕುಲಸಚಿವರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ ; ಮಾಡಿದ್ದಲ್ಲಿ, (ಎಲ್ಲ ವಿಶ್ವ ವಿದ್ಯಾಲಯುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ ಹಾಗೂ ಕುಲಸಚಿವರುಗಳ ಪಟ್ಟಿಯನ್ನು ನೀಡುವುದು)

(ಇ) ಈ ಎಲ್ಲ ವಿಶ್ವ ವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಈ) ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗಿದೆಯೇ ; ಕ್ರಮಕೈಗೊಂಡಿದ್ದಲ್ಲಿ ವಿ.ವಿ. ವಾರು ಸಂಪೂರ್ಣ ವಿವರವನ್ನು ಒದಗಿಸುವುದು ; ಪ್ರಕ್ರಿಯೆಯು ಯಾವ ಹಂತದಲ್ಲಿದೆ ; ಪ್ರತಿಯೊಂದು ವಿ.ವಿ.ಯ ವಿವರವನ್ನು ಸಂಪೂರ್ಣವಾಗಿ ಒದಗಿಸುವುದು ?



## ಉನ್ನತ ಶಿಕ್ಷಣ ಇಲಾಖೆಯ ಖಾಲಿ ಹುದ್ದೆಗಳ ಭರ್ತಿಗೆ ಆರ್ಥಿಕ ಮಿತವ್ಯಯ ಸಡಿಲಿಕೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫ (೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಪ್ರಸ್ತುತ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿತ್ತು ; (ಪದವಿ ಕಾಲೇಜುಗಳ ಹುದ್ದೆವಾರು ವಿವರ ನೀಡುವುದು)

(ಇ) ಈಗಾಗಲೇ ಶಿಕ್ಷಣ ಸಂಸ್ಥೆಗಳು ಹುದ್ದೆಗಳನ್ನು ಇಲಾಖೆಯ ನಿಯಮಗಳಿಗನುಗುಣವಾಗಿ ಅಧಿಸೂಚನೆ ಹೊರಡಿಸಿ, ನೇಮಕ ಮಾಡಿ ವೇತನ ಪಡೆಯುವ ಹಂತಕ್ಕೆ ಬಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ; (ಶಿಕ್ಷಣ ಸಂಸ್ಥೆವಾರು ಪದವಿ ಕಾಲೇಜುಗಳ ವಿವರ ನೀಡುವುದು)

(ಈ) ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮತಿ ದೊರೆತಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಉ) ಆರ್ಥಿಕ ಇಲಾಖೆಯು ಹೊರಡಿಸಿರುವ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಅಥವಾ ಸಡಿಲಗೊಳಿಸುವಂತೆ ಈಗಾಗಲೇ ಪ್ರಸ್ತಾವನೆಯನ್ನು ಉನ್ನತ ಶಿಕ್ಷಣ ಇಲಾಖೆಯು ಮಂಡಿಸಿದೆಯೇ ; ಮಂಡಿಸಿದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ ; (ಈ ಕುರಿತು ಬಂದಿರುವ ಶಿಫಾರಸ್ಸುಗಳ ಪ್ರತಿ ನೀಡುವುದು)

(ಊ) ಈ ಆದೇಶವನ್ನು ಸಡಿಲಗೊಳಿಸಿ ಖಾಲಿ ಹುದ್ದೆಗಳ ಭರ್ತಿಗೆ ಹಾಗೂ ವೇತನದ ಹಂತಕ್ಕೆ ಬಂದ ಪ್ರಸ್ತಾವನೆಗಳನ್ನು ಅನುಮೋದಿಸಿ ವೇತನ ಬಿಡುಗಡೆಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಖಾಸಗಿ ಶಾಲಾ ಕಾಲೇಜುಗಳಲ್ಲಿನ ಶಿಕ್ಷಕರಿಗೆ 'ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೬ (೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಖಾಸಗಿ ಪ್ರಾಥಮಿಕ ಶಾಲೆ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಅಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕರ ಹಾಗೂ ಬೋಧಕೇತರರ ಸಂಖ್ಯೆ ಎಷ್ಟು ;



(ಆ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳಲ್ಲಿರುವ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ಅಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಬೋಧಕರ ಹೆಸರು, ಬೋಧಿಸುತ್ತಿರುವ ವಿಷಯ ಮತ್ತು ಅವರು ಕಾರ್ಯ ನಿರ್ವಹಿಸುತ್ತಿರುವ ಶಾಲಾ ಕಾಲೇಜುಗಳ ವಿವರವನ್ನು ಒದಗಿಸುವುದು ;

(ಈ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಅನುದಾನ ರಹಿತವಾಗಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಹಾಗೂ ಅವರುಗಳ ಹೆಸರು, ಅವರು ಬೋಧಿಸುತ್ತಿರುವ ವಿಷಯ ಹಾಗೂ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳ ಹೆಸರು ಮತ್ತು ವಿಳಾಸವನ್ನು ಒದಗಿಸುವುದು ; (ವಿಜಯಪುರ, ಬಾಗಲಕೋಟೆ ಮತ್ತು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಗಳ ಮಾಹಿತಿ ನೀಡುವುದು)

(ಉ) ಈ ಎಲ್ಲ ಶಿಕ್ಷಕರು ಕೋವಿಡ್–೧೯ ರ ಸಮಸ್ಯೆಯ ಹಿನ್ನೆಲೆಯಲ್ಲಿ ಶಾಲೆಗಳು ನಡೆಯದೇ ಜೀವನ ನಿರ್ವಹಣೆ ಕಷ್ಟವಾಗಿದ್ದು, ಈ ಎಲ್ಲ ಸಿಬ್ಬಂದಿ ವರ್ಗಕ್ಕೆ ಸರ್ಕಾರದಿಂದ "ವಿಶೇಷ ಪ್ಯಾಕೇಜ್" ಘೋಷಣೆ ಮಾಡಿ ಆರ್ಥಿಕ ನೆರವಿಗೆ ಸರ್ಕಾರ ಮುಂದಾಗಲು ತೀರ್ಮಾನಿಸಿದೆಯೇ ? (ವಿವರವನ್ನು ಒದಗಿಸುವುದು)

## ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದವರು ಕಾರ್ಯನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭ (೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಅಕ್ಷರ ದಾಸೋಹ ಕಾರ್ಯಕ್ರಮ ಯೋಜನೆ ನಿರ್ವಹಣೆಗೆ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದವರು ಕಾರ್ಯನಿರ್ವಹಿಸುತ್ತಿದ್ದು ; ಈ ಹುದ್ದೆಯು ಬೋಧಕೇತರ ನೌಕರರ ಹುದ್ದೆಯಾಗಿದ್ದು ಈ ಸಂಬಂಧ ಧಾರವಾಡ ಉಚ್ಚ ನ್ಯಾಯಾಲಯದಲ್ಲಿ ಆದೇಶವಾಗಿದ್ದು ಈ ಬಗ್ಗೆ ಈವರೆವಿಗೂ ಇಲಾಖೆಯುವತಿಯಿಂದ ಯಾವುದೇ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು ; (ಸೂಕ್ತ ದಾಖಲೆಗಳೊಂದಿಗೆ ಮಾಹಿತಿ ನೀಡುವುದು)

(ಆ) ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಹಂತದ ಕಛೇರಿಗಳಲ್ಲಿ ನ್ಯಾಯಾಲಯ ಪ್ರಕರಣಗಳ ಸಂಖ್ಯೆ ಸಾಕಷ್ಟಿದ್ದು, ಜಿಲ್ಲಾ ಹಂತದಲ್ಲಿ ಒಂದು Legal Advisor ಹುದ್ದೆ ಮಂಜೂರು ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ ಈ ಹುದ್ದೆ ಮಂಜೂರಾತಿ ಯಾವಾಗ ಆಗುವುದು ;

(ಇ) ಹೊಸ ಪಿಂಚಣಿ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆಯನ್ನು ಜಾರಿಗೊಳಿಸುವ ಸಂಬಂಧ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)



## ಅರಣ್ಯ ಸಸಿಗಳನ್ನು ಕೃಷಿ ಭೂಮಿಯಲ್ಲಿ ಬೆಳೆಸುವ ಪ್ರೋತ್ಸಾಹದಾಯಕ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮ (೯೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಅರಣ್ಯ ಸಸಿಗಳನ್ನು ಕೃಷಿ ಭೂಮಿಯಲ್ಲಿ ಬೆಳೆಸುವ ಪ್ರೋತ್ಸಾಹದಾಯಕ ಯೋಜನೆಯಡಿಯಲ್ಲಿ ಎಷ್ಟು ಅರಣ್ಯ ಸಸಿಗಳನ್ನು ನೆಡಲಾಗಿದೆ ; ಈ ಸಂಬಂಧ ೨೦೧೮–೧೯ ರಿಂದ ೨೦೨೦–೨೧ ನೇ ಸಾಲಿನಲ್ಲಿ ಫಲಾನುಭವಿ ರೈತರುಗಳಿಗೆ ವಿತರಣೆ ಮಾಡಿರುವ ಸಾಮಾಗ್ರಿಗಳ ವೆಚ್ಚದ ಮತ್ತು ಇತರೆ ವೆಚ್ಚಗಳ ವಿವರಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ನಾಗಮಂಗಲ ತಾಲ್ಲೂಕಿನ ವ್ಯಾಪ್ತಿಯಲ್ಲಿನ ಸಾಮಾಜಿಕ ಅರಣ್ಯ ವಲಯ ಅರಣ್ಯಾಧಿಕಾರಿಗಳು ತಾಲ್ಲೂಕಿನ ರೈತ ಫಲಾನುಭವಿಗಳಿಗೆ ಕಳೆದ ಮೂರು ವರ್ಷಗಳಿಂದ ಸಾಮಗ್ರಿ ವೆಚ್ಚವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ವಿರುದ್ದ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಈ ಯೋಜನೆಯಡಿ ಸರ್ಕಾರ ನಿಗಧಿ ಮಾಡಿರುವ ಸಾಮಗ್ರಿ ವೆಚ್ಚ, ಸಾಗಾಣೆ ವೆಚ್ಚ, ನಿರ್ವಹಣೆ ವೆಚ್ಚಗಳಿಗೆ ಸಂಬಂಧಿಸಿದಂತೆ ರೈತರಿಗೆ ನೀಡಲಾಗುವ ಮೊತ್ತವೆಷ್ಟು ; ಈ ಬಗ್ಗೆ ಇರುವ ಸರ್ಕಾರದ ಸುತ್ತೋಲೆಯೊಂದಿಗೆ ಸಂಪೂರ್ಣ ವಿವರ ನೀಡುವುದು ;

(ಈ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಎಷ್ಟು ಮೊತ್ತವನ್ನು ಈ ಯೋಜನೆಗೆ ವೆಚ್ಚ ಮಾಡಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಎಜಿಪಿ–೯೦೦೦ ವೃತ್ತಿ ಪದೋನ್ನತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯ (೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಜಿಪಿ–೯೦೦೦ ವೃತ್ತಿ ಪದೋನ್ನತಿ ಪಡೆಯಲು ದಿನಾಂಕ : ೧೧.೦೭.೨೦೧೬ರ ಯು.ಜಿ.ಸಿ ಮಾರ್ಗಸೂಚಿಯಂತೆ ಯು.ಜಿ.ಸಿ ಪ್ರಾಯೋಜಕತ್ವದಲ್ಲಿ ಮತ್ತು ಕಾಲೇಜು ಶಿಕ್ಷಣ ಇಲಾಖೆಯಿಂದ ಗೊತ್ತುಪಡಿಸಿರುವ ಅನುಮೋದಿತ ತರಬೇತಿ ಸಂಸ್ಥೆಗಳಿಂದ ಕೈಗೊಳ್ಳುವ ಶಿಬಿರ/ಕಾರ್ಯಾಗಾರ/ ತರಬೇತಿಗಳಾವುವು ; (ವಿವರಗಳನ್ನು ಒದಗಿಸುವುದು)

(ಆ) ದಿನಾಂಕ : ೧೧.೦೭.೨೦೧೬ ರ ಯು.ಜಿ.ಸಿ ಮಾರ್ಗಸೂಚಿಯನ್ವಯ AICTE ಪ್ರಾಯೋಜಿತ Engineering ಶಿಕ್ಷಣ ಸಂಸ್ಥೆಗಳಲ್ಲಿ ಕೈಗೊಳ್ಳುವ ೭ ಅಥವಾ ಹೆಚ್ಚಿನ ದಿನಗಳು ನಡೆಸಲ್ಪಡುವ FDP ತರಬೇತಿಗಳು ತರಬೇತಿಯನ್ನು ನೀಡಲು ಅರ್ಹತೆ ಪಡೆದಿರುವ/ ಪಡೆಯದಿರುವ ಸಂಸ್ಥೆಗಳಾವುವು ; (ಆದೇಶಗಳನ್ನು ಒದಗಿಸುವುದು)



(ಇ) ಎಜಿಪಿ–೯೦೦೦ ವೃತ್ತಿ ಪದೋನ್ನತಿ ನೀಡಲು ದಿನಾಂಕ : ೧೦.೧೦.೨೦೧೮ ರಂದು ನಡೆದ ಪರಿಶೀಲನಾ ಸಮಿತಿಯ ಮುಂದೆ ಹಾಜರಾಗಿದ್ದ ಸಹಾಯಕ ಪ್ರಾಧ್ಯಾಪಕರುಗಳಲ್ಲಿ ತಿರಸ್ಕೃತಗೊಂಡಿರುವವರು ಯಾರು ; (ಮಾಹಿತಿಯನ್ನು ಒದಗಿಸುವುದು)

(ಈ) ತಿರಸ್ಕೃತಗೊಂಡ ಸಹಾಯಕ ಪ್ರಾಧ್ಯಾಪಕರುಗಳು ಹಾಜರುಪಡಿಸಿದ್ದ FDP ತರಬೇತಿ ಪ್ರಮಾಣ ಪತ್ರಗಳು, ಮತ್ತಿತರೆ ಕೋರ್ಸ್ ದಾಖಲೆಗಳನ್ನು ಪರಿಗಣಿಸುವ ಅಥವಾ ಪರಿಗಣಿಸದಿರುವ ಬಗ್ಗೆ ಯು.ಜಿ.ಸಿಯಿಂದ ಪಡೆಯಲಾದ ಸ್ಪಷ್ಟೀಕರಣ ಏನು ; (ವಿವರಗಳನ್ನು ಒದಗಿಸುವುದು)

(ಉ) ದಿನಾಂಕ:೧೦.೧೦.೨೦೧೮ ರಂದು ನಡೆದ ಪರಿಶೀಲನಾ ಸಮಿತಿಯ ಮುಂದೆ ಹಾಜರಾಗಿದ್ದ ಸಹಾಯಕ ಪ್ರಾಧ್ಯಾಪಕರುಗಳು ಪ್ರಸ್ತಾಪನೆಗಳನ್ನು ಸಲ್ಲಿಸುವ ಮುನ್ನ ಇಂತಹದ್ದೇ ರಿಫ್ರೇಶರ್ ಕೋರ್ಸ್, ಕಿರು ಅವಧಿಯ ಕೋರ್ಸ್‌ಗಳು ಮತ್ತು FDP ತರಬೇತಿಗಳ ಬಗ್ಗೆ ಸರ್ಕಾರ ನಿರ್ದಿಷ್ಟವಾಗಿ ಸುತ್ತೋಲೆಗಳನ್ನು ಹೊರಡಿಸಿದೆಯೇ ? (ಹೊರಡಿಸಿದ್ದಲ್ಲಿ ಪ್ರತಿಗಳನ್ನು ನೀಡುವುದು)

## ಡಾ॥ ಬಿ.ಆರ್. ಅಂಬೇಡ್ಕರ್ ಭವನ ಮತ್ತು ಬಾಬು ಜಗಜೀವನ್‌ರಾಮ್ ಭವನಗಳ ಬಗ್ಗೆ.

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦ (೧೭೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅಪೂರ್ಣಗೊಂಡಿರುವ ಡಾ॥ ಬಿ.ಆರ್. ಅಂಬೇಡ್ಕರ್ ಭವನಗಳು ಮತ್ತು ಬಾಬು ಜಗಜೀವನ್ ರಾವ್ ಭವನಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಭವನಗಳು ಯಾವ ಅವಧಿಯಿಂದ ಅಪೂರ್ಣಗೊಂಡಿವೆ ; ಯಾವ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು ;

(ಇ) ಈ ಬಗ್ಗೆ ಸರ್ಕಾರದ ಮುಂದಿನ ಕ್ರಮವೇನು ?

## ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ವಿಜ್ಞಾನ ತಂತ್ರಜ್ಞಾನ ಇಲಾಖೆಯ ಅಧೀನದಲ್ಲಿ ಬರುವ ನಿಗಮಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೧ (೮೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು, ಮತ್ತು ಸೊಸೈಟಿಗಳು ಯಾವುವು; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು)



(ಇ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ/ಪ್ರಾಯೋಜಿತ/ಇತರೆ ಯೋಜನೆಗಳಾವುವು; ಸದರಿ ಯೋಜನೆಗಳಿಗೆ ೨೦೧೯–೨೦ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಈ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ನಿಶ್ಚಿತ ಠೇವಣಿ ಇಟ್ಟಿವೆ ; ನಿಶ್ಚಿತ ಠೇವಣಿ ಇಡಲು ಕಾರಣಗಳೇನು ; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು ? (ಸಂಸ್ಥೆವಾರು ಮಾಹಿತಿ ನೀಡುವುದು)

## ವಿಶ್ವವಿದ್ಯಾನಿಲಯಗಳಲ್ಲಿ ದೂರ ಶಿಕ್ಷಣ ಕಾರ್ಯಕ್ರಮಗಳನ್ನು ರದ್ದುಗೊಳಿಸಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೨ (೧೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸಾಂಪ್ರದಾಯಿಕ ಹಾಗೂ ಇತರೆ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು; ಅವು ಯಾವುವು ; ಅವುಗಳನ್ನು ಯಾವಾಗ ಸ್ಥಾಪನೆ ಮಾಡಲಾಯಿತು; ಅವುಗಳಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ, ಕುಲಸಚಿವರುಗಳ ವಿವರ ಒದಗಿಸುವುದು ; (ವಿಶ್ವವಿದ್ಯಾಲಯವಾರು ವಿವರವಾದ ಮಾಹಿತಿ ಒದಗಿಸುವುದು)

(ಆ) ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಯಾವ ಯಾವ ವರ್ಷಗಳಿಂದ ದೂರ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಇ) ಇತ್ತೀಚೆಗೆ ಸರ್ಕಾರವು ದೂರ ಶಿಕ್ಷಣ ಕಾರ್ಯಕ್ರಮವನ್ನು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಮಾತ್ರ ಮುಂದುವರೆಸುವಂತೆ ಆದೇಶ ಮಾಡಿ, ಇತರೆ ವಿಶ್ವವಿದ್ಯಾಲಯಗಳಲ್ಲಿ ಈ ಕಾರ್ಯಕ್ರಮಗಳನ್ನು ರದ್ದುಗೊಳಿಸಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ರಾಜ್ಯದಲ್ಲಿ ಉನ್ನತ ಶಿಕ್ಷಣ ಪಡೆಯಬೇಕೆಂಬ ಹಂಬಲವಿರುವ ದೂರ ಶಿಕ್ಷಣ ವಿದ್ಯಾರ್ಥಿಗಳ ಭವಿಷ್ಯವೇನು ;

(ಉ) ಸರ್ಕಾರವು ಯಾವ ಕಾಲಮಿತಿಯೊಳಗೆ ಈ ಆದೇಶವನ್ನು ರದ್ದುಗೊಳಿಸಿ, ಮೊದಲಿನಂತೆಯೇ ಮುಂದುವರೆಸಲು ಕ್ರಮ ಕೈಗೊಳ್ಳುವುದು ?

## ಕೊರೋನಾ ೨ನೇ ಅಲೆಗೆ ಮುಂಜಾಗ್ರತೆ ವಹಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೩ (೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಪ್ಪಳಿಸಲಿರುವ ಕೊರೋನಾ ೨ನೇ ಅಲೆಗೆ ರಾಜ್ಯ ಸರ್ಕಾರ ಕೈಗೊಂಡ ಕಟ್ಟುನಿಟ್ಟಿನ ಕ್ರಮಗಳೇನು ; (ವಿವರ ನೀಡುವುದು)

(ಆ) ಈಗಾಗಲೇ ದೇಶದ ವಿವಿಧ ಭಾಗಗಳಲ್ಲಿ ಕೊರೋನಾ ೨ನೇ ಅಲೆಯು ಆರಂಭವಾಗಿದ್ದು, ರಾಜ್ಯದಲ್ಲಿಯೂ ಸಹ ಬೆಡ್, ವೆಂಟಿಲೇಟರ್ ಮತ್ತು ಸೂಕ್ತ ಸಮಯದಲ್ಲಿ ಆಂಬ್ಯುಲೆನ್ಸ್ ಸಂಪೂರ್ಣವಾಗಿ ವ್ಯವಸ್ಥೆ ಮಾಡಿಕೊಳ್ಳಲಾಗಿದೆಯೇ ;



(ಇ) ಸರ್ಕಾರ ತುರ್ತು ಸಮಯದಲ್ಲಿ ಸಂಪರ್ಕಿಸಲು ಆಸ್ಪತ್ರೆಯ ದೂರವಾಣಿ ಸಂಖ್ಯೆಗಳನ್ನು ನೀಡಿದ್ದು, ಬಹುತೇಕ ದೂರವಾಣಿ ಸಂಖ್ಯೆಗಳು ದುರಸ್ಥಿಯಲ್ಲಿರುವುದು ಹಾಗೂ ಇನ್ನು ಕೆಲವು ಕರೆಗಳನ್ನು ಸ್ವೀಕರಿಸದೇ ಇರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಕೊರೋನಾ ೨ನೇ ಅಲೆಗೆ ಈ ರೀತಿ ಆಗದಂತೆ ಸರ್ಕಾರ ಕೈಗೊಂಡ ಮುನ್ನೆಚ್ಚರಿಕೆ ಕ್ರಮಗಳೇನು ; ಆಸ್ಪತ್ರೆಗಳಿಗೆ ಸರ್ಕಾರದಿಂದ ಹೋದ ನಿರ್ದೇಶನಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಹಾಸ್ಟೆಲ್‌ಗಳನ್ನು ಸುಧಾರಣೆ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೪ (೨೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ವಾಸವಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿರುವ ಹಲವು ವಿದ್ಯಾರ್ಥಿ ನಿಲಯಗಳು ಸುಧಾರಣೆ ಕಾಣದೇ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರಸ್ತುತ ಕೋವಿಡ್–೧೯ ಸನ್ನಿವೇಶದಿಂದಾಗಿ ವಿದ್ಯಾರ್ಥಿ ನಿಲಯಗಳು ಖಾಲಿ ಇದ್ದು, ಇವುಗಳ ಸುಧಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ; (ಪೂರ್ಣ ವಿವರ ನೀಡುವುದು)

(ಈ) ವಿದ್ಯಾರ್ಥಿಗಳು ಹಾಸ್ಟೆಲ್‌ಗಳಲ್ಲಿ ಮನೆಯ ವಾತಾವರಣವನ್ನು ಕಾಣುವಂತೆ ಮಾಡಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

## ಶಿಕ್ಷಕರಿಗೆ ವಿಶೇಷ ಭತ್ಯೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೫ (೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ:೦೧.೦೮.೨೦೦೮ ರ ನಂತರ ನೇರ ನೇಮಕಾತಿ ಹೊಂದಿದ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲಾ ಶಿಕ್ಷಕರ ಸಂಖ್ಯೆ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜಗಳ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಸದರಿ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ವಿಶೇಷ ಭತ್ಯೆಯು ಮಂಜೂರಾಗದೆ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಈಗಾಗಲೇ ಮಂಜೂರಾಗಿರುವ ವಿಶೇಷ ಭತ್ಯೆಯನ್ನು ವಸೂಲು ಮಾಡುವಂತೆ ಸರ್ಕಾರವು ಆದೇಶಿಸುವುದು ಸಮಂಜಸವೇ ;

(ಈ) ಘನತೆವೆತ್ತ ನ್ಯಾಯಲಯ ಮತ್ತು ಕರ್ನಾಟಕ ಮೇಲ್ಮನವಿ ನ್ಯಾಯಮಂಡಳಿಯಿಂದ ದಿನಾಂಕ:೦೧.೦೮.೨೦೦೮ ರ ನಂತರ ನೇಮಕಾತಿಗೊಂಡ ಶಿಕ್ಷಕರು ಹಾಗೂ ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆ ನೀಡುವುದು ಸಮಂಜಸವೆಂದು ಹೇಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಉ) ಹಾಗಿದ್ದಲ್ಲಿ, ಸರ್ಕಾರವು ಸದರಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಮಂಜೂರಾಗಿರುವ ವಿಶೇಷ ಭತ್ಯೆಯನ್ನು ಎಂದಿನಿಂದ ಮುಂದುವರೆಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ಅಥಿತಿ ಉಪನ್ಯಾಸಕರ ವೇತನ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೬ (೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು ಅತಿಥಿ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ;

(ಆ) ಸದರಿ ಉಪನ್ಯಾಸಕರುಗಳಿಗೆ ವೇತನವು ಸರಿಯಾಗಿ ದೊರಕದೇ, ಜೀವನ ನಿರ್ವಹಣೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ವೇತನವು ಸರಿಯಾಗಿ ದೊರಕುವಂತಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪರಿಸರ ಸೂಕ್ಷ್ಮ ವಲಯದ ಅಧಿಸೂಚನೆಯ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೭ (೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಉದ್ಯಾನವನ (National Park) ಮತ್ತು ವನ್ಯ ಜೀವಿ ಅಭಯಾರಣ್ಯಗಳ (Wildlife

sanctuaries) ಸಂಖ್ಯೆ ಎಷ್ಟು ; ಅವುಗಳ ವಿಸ್ತೀರ್ಣವೆಷ್ಟು; (ವೃತ್ತವಾರು ಮತ್ತು ವಿಭಾಗವಾರು ಮಾಹಿತಿಯನ್ನು ನೀಡುವುದು)

(ಆ) ಕುದುರೆಮುಖ ರಾಷ್ಟ್ರೀಯ ಉದ್ಯಾನವನ, ಸೋಮೇಶ್ವರ ವನ್ಯ ಜೀವಿ ಅಭಯಾರಣ್ಯ ಮೂಕಾಂಬಿಕಾ ವನ್ಯ ಜೀವಿ ಅಭಯಾರಣ್ಯ ಪ್ರದೇಶದಲ್ಲಿ ಪರಿಸರ ಸೂಕ್ಷ್ಮ ವಲಯದ (eco sensitive zone) ಅಧಿಸೂಚನೆಯನ್ನು ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ, ಅಧಿಸೂಚನೆಯ ಪ್ರತಿಯನ್ನು ಒದಗಿಸುವುದು)

(ಇ) ಈ ಮೂರು ಪ್ರದೇಶಗಳಲ್ಲಿ (zone Master plan)ನ್ನು ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಯೋಜನೆಗೆ ಮಾನಿಟರಿಂಗ್ ಸಮಿತಿಯಿಂದ ಅನುಮೋದನೆ ಪಡೆಯಲಾಗಿದೆಯೇ ; (ಪ್ರತಿಯನ್ನು ಒದಗಿಸುವುದು)

(ಈ) ಈ ಅಧಿಸೂಚನೆಯ ವ್ಯಾಪ್ತಿಗೆ ಒಳಪಡುವ ಗ್ರಾಮಗಳು ಯಾವುವು ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಪಟ್ಟಿಯನ್ನು ಒದಗಿಸುವುದು) ಅವುಗಳಲ್ಲಿ ಅನುಮತಿಸಲಾದ ಮತ್ತು ನಿರ್ಭಂದಿಸಲಾದ ಚಟುವಟಿಕೆಗಳು ಯಾವುವು ? (ಪಟ್ಟಿಯನ್ನು ಒದಗಿಸುವುದು)

## ಪದವಿ ಕಾಲೇಜುಗಳಲ್ಲಿ ಪತ್ರಿಕೋದ್ಯಮ ಕೋರ್ಸ್ ಪ್ರಾರಂಭಿಸುವ ಬಗ್ಗೆ

**ಡಾ॥ ಚಂದ್ರಶೇಖರ ಬಿ ಪಾಟೀಲ್ (ಪದವೀಧರ ಕ್ಷೇತ್ರ) :–**

೧೮ (೮೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ರಾಜ್ಯದ ಯಾವ ಯಾವ ಪದವಿ ಕಾಲೇಜುಗಳಲ್ಲಿ ಪತ್ರಿಕೋದ್ಯಮ ಪದವಿ ಕೋರ್ಸ್‌ನ್ನು ಪರಿಚಯಿಸಲಾಗಿದೆ ; ಸದರಿ ಕಾಲೇಜುಗಳಲ್ಲಿ ಭರ್ತಿ ಮಾಡಲಾಗಿರುವ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಕಲ್ಯಾಣ ಕರ್ನಾಟಕದ ಎಷ್ಟು ಪದವಿ ಕಾಲೇಜುಗಳಲ್ಲಿ ಈ ಕೋರ್ಸ್‌ನ್ನು ಪರಿಚಯಿಸಲಾಗಿದೆ; ಬಹಳಷ್ಟು ಕಾಲೇಜುಗಳಲ್ಲಿ ಪರಿಚಯಿಸದಿರಲು ಕಾರಣವೇನು ; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ?

## ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದಿರುವ ಬಗ್ಗೆ

**ಡಾ॥ ಚಂದ್ರಶೇಖರ ಬಿ ಪಾಟೀಲ್ (ಪದವೀಧರ ಕ್ಷೇತ್ರ) :–**

೧೯ (೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ನಿಧನ ಮುಂತಾದ ಕಾರಣಗಳಿಂದ ಖಾಲಿ ಇರುವ ಬೋಧಕೇತರ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡದಿರಲು ಕಾರಣವೇನು ;

(ಆ) ಖಾಸಗಿ ಅನುದಾನತ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ನಿಧನ, ಮುಂತಾದ ಕಾರಣಗಳಿಂದ ಖಾಲಿ

ಇರುವ ಬೋಧಕ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡುವಾಗ ಕಾಲೇಜುನ್ನು ಒಂದು ಘಟಕವನ್ನಾಗಿ ಪರಿಗಣಿಸದೆ ವಿಷಯ/ ವಿಭಾಗವನ್ನು ಒಂದು ಘಟಕವನ್ನಾಗಿ ಪರಿಗಣಿಸಿ ಮೀಸಲಾತಿಯನ್ನು ನಿಗಧಿಪಡಿಸುವುದರಿಂದ ಸಾಮಾಜಿಕ ಅನ್ಯಾಯ ಆಗುತ್ತಿಲ್ಲವೆ ;

(ಇ) ಸರ್ಕಾರಿ ಹಾಗೂ ಅನುದಾನತ ಪದವಿ ಕಾಲೇಜುಗಳಲ್ಲಿ ಪೂರ್ಣಾವಧಿ ಪ್ರಾಂಶುಪಾಲರ ನೇಮಕಾತಿ ಮಾಡಲಾಗುವುದು ಯಾವಾಗ ;

(ಈ) ರಾಜ್ಯದ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ನಿಧನರಾದ ಸಿಬ್ಬಂದಿಗಳ ಅವಲಂಬಿತರಿಗೆ/ ಕುಟುಂಬಸ್ತರಿಗೆ ಅನುಕಂಪದ ಆಧಾರದ ಮೇಲೆ ನೀಡುವ ಸೇವಾ ಸೌಲಭ್ಯ ಸ್ಥಗಿತಗೊಳಿಸಿರುವುದರಿಂದ ಅಂತಹ ಕುಟುಂಬಗಳು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಲೆಕ್ಕ ಅಧೀಕ್ಷಕರ ವೇತನ ಶ್ರೇಣಿಯಲ್ಲಿ ತಾರತಮ್ಯದ ಬಗ್ಗೆ

**ಡಾ॥ ಚಂದ್ರಶೇಖರ ಬಿ ಪಾಟೀಲ್ (ಪದವೀಧರ ಕ್ಷೇತ್ರ) :–**

೨೦ (೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ರಿಂದ ಇಲ್ಲಿಯವರೆಗೆ ಕಲಬುರಗಿ ವಿಭಾಗದ ಶಿಕ್ಷಣ ಆಯುಕ್ತಾಲಯದಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗೆ ಬಡ್ತಿಯನ್ನು ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ, ಎಷ್ಟು ಜನರಿಗೆ ನೀಡಲಾಗಿದೆ. ಸದರಿ ಲೆಕ್ಕ ಅಧೀಕ್ಷಕರಿಗೆ ಯಾವ ವೇತನ ಶ್ರೇಣಿಯನ್ನು ನೀಡಲಾಗಿದೆ ;



(ಆ) ಬೆಂಗಳೂರು ಹಾಗೂ ಇತರೆ ಶಿಕ್ಷಣ ಆಯುಕ್ತಾಲಯದಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗೆ ಬಡ್ತಿಯನ್ನು ನೀಡಿದಾಗ ಯಾವ ವೇತನ ಶ್ರೇಣಿಯನ್ನು ನೀಡಲಾಗುವುದು ;

(ಇ) ಬೆಂಗಳೂರು ಹಾಗೂ ಕಲಬುರಗಿ ಶಿಕ್ಷಣ ಆಯುಕ್ತಾಲಯದವರು ನೀಡುತ್ತಿರುವ ಲೆಕ್ಕ ಅಧೀಕ್ಷಕರ ವೇತನ ಶ್ರೇಣಿಯು ಒಂದೆ ಆಗಿದೆಯೇ ; ಇಲ್ಲದಿದ್ದಲ್ಲಿ ತಾರತಮ್ಯಕ್ಕೆ ಕಾರಣಗಳೇನು ;

(ಈ) ಕಲಬುರಗಿ ಶಿಕ್ಷಣ ಆಯುಕ್ತಾಲಯದ ಲೆಕ್ಕ ಅಧೀಕ್ಷಕರಿಗೆ ಆಗಿರುವ ವೇತನ ತಾರತಮ್ಯವನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು; ಮಾಹಿತಿ ಒದಗಿಸುವುದು ?

## ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಭವನಗಳ ನಿರ್ಮಾಣ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧ (೧೭೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ನಿರ್ಮಿಸಿರುವ ಅಂಬೇಡ್ಕರ್ ಭವನ, ಜಗಜೀವನರಾಂ ಭವನ, ಮತ್ತು ವಾಲ್ಮೀಕಿ ಭವನಗಳ ಸಂಖ್ಯೆ ಎಷ್ಟು; ಎಷ್ಟು ಭವನಗಳು ಅಪೂರ್ಣವಾಗಿವೆ ; ಈ ಭವನಗಳನ್ನು ನಿರ್ವಹಣೆ ಮಾಡುವವರು ಯಾರು ;

(ಆ) ಈ ಭವನಗಳ ನಿರ್ಮಾಣಕ್ಕೆ ಬೇಕಾದ ಅನುದಾನವನ್ನು ಒದಗಿಸುವುದಾಗಿ ಮಾನ್ಯ ಮಂತ್ರಿಗಳು ಈ ಹಿಂದೆ ಭರವಸೆ ನೀಡಿದ್ದರೂ ಭವನಗಳು ಪೂರ್ಣವಾಗಿ ನಿರ್ಮಾಣವಾಗದಿರಲು ಕಾರಣವೇನು ;

(ಇ) ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯ ಹಣವನ್ನು ಒದಗಿಸಿ ಈ ಭವನಗಳ ನಿರ್ಮಾಣ ಮತ್ತು ನಿರ್ವಹಣೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) ಈ ಜಿಲ್ಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಭವನಗಳನ್ನು ಆದಷ್ಟು ಬೇಗ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ?

## ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨ (೧೭೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಎಷ್ಟು ಜನರಿಗೆ ಸಾಲ/ಸಹಾಯಧನ ಒದಗಿಸಲಾಗಿದೆ ; ಇನ್ನೂ ಎಷ್ಟು ಜನರಿಗೆ ಒದಗಿಸಬೇಕಾಗಿದೆ; (ಕಳೆದ ೨ ವರ್ಷಗಳ ಮಾಹಿತಿ ಒದಗಿಸುವುದು)

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಾಲ/ಸಹಾಯಧನಕ್ಕಾಗಿ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಎಷ್ಟು ಜನರಿಗೆ ನೀಡಲಾಗಿದೆ ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಇ) ಅನುದಾನದ ಕೊರತೆಯಿಂದ ಸಾಲ/ಸಹಾಯಧನವನ್ನು ಅಗತ್ಯವಿರುವವರಿಗೆ ಒದಗಿಸಲು ಸಾಧ್ಯವಾಗುತ್ತಿಲ್ಲದಿರುವುದರಿಂದ ಹೆಚ್ಚಿನ ಅನುದಾನ ಒದಗಿಸಿ ಈ ಕೊರತೆ ನಿವಾರಿಸಲಾಗುವುದೆ ?



## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ನೇಮಕ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೩ (೧೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ವೈದ್ಯರುಗಳನ್ನು ನೇಮಕಾತಿ ಮಾಡಲು ಸರ್ಕಾರ ಕೈಗೊಂಡಕ್ರಮಗಳೇನು ;

(ಇ) ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳನ್ನು (ಚರ್ಮ, ಮೂಳೆ ಸ್ತ್ರೀ ರೋಗ ಮುಂತಾದ) ನೇಮಕ ಮಾಡಲಾಗಿದೆಯೇ ; ಮಾಡದಿದ್ದರೆ, ಯಾವ ಅವಧಿಯಲ್ಲಿ ನೇಮಕ ಮಾಡಿಕೊಳ್ಳಲಾಗುವುದು ?

## ಕೌಶಾಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಇಲಾಖೆ ಯೋಜನೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೪ (೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೌಶಾಲ್ಯಾಭಿವೃದ್ದಿ, ಉದ್ದಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳ ಪ್ರಯೋಜನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಕೌಶಲ್ಯಾಭಿವೃದ್ದಿ ಕೇಂದ್ರಗಳನ್ನು ತೆರೆಯಲಾಗಿದೆ ; ಈ ಕೇಂದ್ರಗಳ ಮುಖ್ಯ ಉದ್ದೇಶ ಮತ್ತು ಕಾರ್ಯ ಚಟುವಟಿಕೆ ವಿವರ ನೀಡುವುದು ;

(ಇ) ಹಾಸನ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಸರ್ಕಾರ ಕೈಗೊಂಡಿರುವ ಕಾರ್ಯಚಟುವಟಿಕೆಗಳೇನು ? (ಸಂಪೂರ್ಣ ವಿವರ ನೀಡುವುದು)

## ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಂಸ್ಥೆಗಳ ಸ್ಥಾಪನೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫ (೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಆಧಾರಿತ ಎಷ್ಟು ಸಂಸ್ಥೆಗಳಿವೆ ; (ವಿವರ ನೀಡುವುದು) ಈ ಸಂಸ್ಥೆಗಳಲ್ಲಿ ಸರೋಜಿನಿ ಮಹಿಷಿ ವರದಿಯಂತೆ ಸ್ಥಳೀಯರಿಗೆ ಉದ್ಯೋಗಾವಕಾಶಗಳನ್ನು ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಸರ್ಕಾರವು ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು).



(ಆ) ಬೆಂಗಳೂರು ನಗರ ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪನೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದ್ದಲ್ಲಿ; ಯಾವ ಯಾವ ಪ್ರದೇಶಗಳಲ್ಲಿ ಈ ಕೇಂದ್ರಗಳನ್ನು ತೆರೆಯಲಾಗುವುದು ; (ವಿವರ ನೀಡುವುದು)

(ಇ) ಬೆಂಗಳೂರು ನಗರ ಹೊರತುಪಡಿಸಿ ರಾಜ್ಯದ ಇತರೆ ಭಾಗಗಳಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪನೆ ಮಾಡಲು ಖಾಸಗಿ ಕಂಪನಿಗಳಿಗೆ ಸರ್ಕಾರವು ಒದಗಿಸುತ್ತಿರುವ ಸವಲತ್ತುಗಳೇನು ? (ವಿವರ ನೀಡುವುದು)

## ಸರ್ವ ಶಿಕ್ಷಣ ಅಭಿಯಾನ ಯೋಜನೆ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬ (೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨–೧೩ನೇ ಸಾಲಿನವರೆಗೆ ರಾಜ್ಯಾದ್ಯಂತ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ವ ಶಿಕ್ಷಣ ಅಭಿಯಾನದಡಿ ಅನುದಾನ ಒದಗಿಸಲಾಗುತ್ತಿದ್ದು, ಅಭಿಯಾನದ ಅವಧಿ ಮುಗಿದ ನಂತರದ ದಿನಗಳಲ್ಲಿ ಸರ್ಕಾರಿ ಶಾಲೆಗಳ ದುರಸ್ಥಿ/ಅಭಿವೃದ್ಧಿಗೆ ಅನುದಾನದ ಕೊರತೆ ಉಂಟಾಗಿದ್ದು, ಶಾಲೆಗಳ ಸ್ಥಿತಿ ಚಿಂತಾಜನಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಸರ್ವ ಶಿಕ್ಷಣ ಅಭಿಯಾನದ ಬದಲಿಗೆ ಯಾವ ಯೋಜನೆಯಿಂದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅನುದಾನ ಒದಗಿಸಲು ತೀರ್ಮಾನಿಸಲಾಗಿದೆ ? (ವಿವರ ನೀಡುವುದು)

## ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಶ್ರೇಯೋಭಿವೃದ್ಧಿ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭ (೧೨) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; ಯಾವ ಯಾವ ಉದ್ಯಮಗಳಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ; (ವಿವರ ನೀಡುವುದು) ರಾಜ್ಯದ ಯಾವ ಯಾವ ನಗರಗಳಲ್ಲಿ ಇ ಎಸ್ ಐ ಆಸ್ಪತ್ರೆಗಳಿವೆ ; (ವಿವರ ನೀಡುವುದು)

(ಆ) ಸರ್ಕಾರವು ಕಾರ್ಮಿಕರಿಗೆ ನಿಗದಿಪಡಿಸಿರುವ ಮಾಸಿಕ ವೇತನ ಮತ್ತು ಇತರೆ ಭತ್ಯೆಗಳ ವಿವರ ನೀಡುವುದು; ಕೆಲಸ ನಿರ್ವಹಿಸುವ ಜಾಗದಲ್ಲಿ ಕಾರ್ಮಿಕರಿಗೆ ಅಪಘಾತವಾಗಿ ಅಂಗವಿಕಲತೆ ಅಥವಾ ಇತರೆ ತೊಂದರೆಗಳು ಉಂಟಾದಲ್ಲಿ ಅಂತಹ ಕಾರ್ಮಿಕರಿಗೆ ಸರ್ಕಾರ ಮತ್ತು ಉದ್ಯೋಗದಾತರು ನೀಡುವ ಪರಿಹಾರಗಳೇನು ; (ವಿವರ ನೀಡುವುದು)

(ಇ) ಸರ್ಕಾರವು ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಅನುಷ್ಠಾನಗೊಳಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳ ಮಾನದಂಡಗಳೇನು ; ಈ ಯೋಜನೆಗಳಡಿ ಕಳೆದೆರಡು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರಯೋಜನ ಪಡೆದಿರುವ ಕಾರ್ಮಿಕರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)



## ಜೆ.ಓ.ಸಿ ನೌಕರುಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮ (೨೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜೆ.ಓ.ಸಿ ಕೋರ್ಸ್‌ಗಳನ್ನು ಮುಚ್ಚಲು ಸರ್ಕಾರವು ಆದೇಶಿಸಿರುವುದು ನಿಜವೇ; ಹಾಗಿದ್ದಲ್ಲಿ ಯಾವಾಗ ಆದೇಶಿಸಲಾಗಿದೆ ;

(ಆ) ಜೆ.ಓ.ಸಿ ಕೋರ್ಸ್‌ಗಳನ್ನು ಮುಚ್ಚಿದಾಗ ಅಲ್ಲಿದ್ದ ಸಿಬ್ಬಂದಿಗಳನ್ನು ಬೇರೆ ಇಲಾಖೆಗಳಲ್ಲಿ ವಿಲೀನಗೊಳಿಸಲು ಸರ್ಕಾರವು ಆದೇಶಿಸಿರುವುದು ಯಾವಾಗ ;

(ಇ) ಈ ಆದೇಶದನ್ವಯ ಬೇರೆ ಇಲಾಖೆಗಳಲ್ಲಿ ಇಲ್ಲಿಯವರೆಗೆ ವಿಲೀನಗೊಳಿಸಿದ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಈ) ೫ ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದ ಇನ್ನು ಎಷ್ಟು ಸಿಬ್ಬಂದಿಗಳನ್ನು ವಿಲೀನಗೊಳಿಸುವುದು ಬಾಕಿ ಇದೆ ;

(ಉ) ಬಾಕಿ ಉಳಿದಿರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಸರ್ಕಾರ ಬೇರೆ ಇಲಾಖೆಗಳಲ್ಲಿ ವಿಲೀನಗೊಳಿಸಲಾಗುವುದು ?

## ಕಿಯೋನಿಕ್ಸ್ ಸಂಸ್ಥೆಯಲ್ಲಿನ ಸೇವೆಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯ (೨೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಿಯೋನಿಕ್ಸ್ (Keonics) ಸಂಸ್ಥೆಯನ್ನು ಯಾವಾಗ ಸ್ಥಾಪಿಸಲಾಯಿತು; ಈ ಸಂಸ್ಥೆಯ ಧ್ಯೇಯೋದ್ದೇಶಗಳೇನು ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರೆಷ್ಟು; (ನೌಕರರ ಹೆಸರು, ಹುದ್ದೆಯ ಪದನಾಮ, ವಿದ್ಯಾರ್ಹತೆ, ವೇತನ ಶ್ರೇಣಿ ಹಾಗೂ ಪ್ರಸ್ತುತ ಇವರು ಮಾಸಿಕ ಪಡೆಯುತ್ತಿರುವ ವೇತನದ ಮಾಹಿತಿ ಒದಗಿಸುವುದು)

(ಇ) ಸದರಿ ಸಂಸ್ಥೆಯು ಕಾಮಗಾರಿ ಹಾಗೂ ಮಾನವ ಶಕ್ತಿ ಸೇವೆ ಪೂರೈಸಲು KTTP Act ಪ್ರಕಾರ ೪ಜಿ ವಿನಾಯಿತಿ ಪಡೆಯಲಾಗಿದೆಯೇ; ಪಡೆದಿದ್ದರೆ ಯಾವ ಯಾವ ಕಾಮಗಾರಿ/ಸೇವೆಗಳಿಗೆ ಪಡೆಯಲಾಗಿದೆ ; (ವಿವರವಾದ ಮಾಹಿತಿ ಒದಗಿಸುವುದು)

(ಈ) ಸದರಿ ಸಂಸ್ಥೆಯು ನೀಡುತ್ತಿರುವ ಸೇವೆಗಳು ಯಾವುವು; ಇವುಗಳಿಗೆ ಸಂಸ್ಥೆಯು ಪಡೆಯುತ್ತಿರುವ ಸೇವಾ ಶುಲ್ಕವೆಷ್ಟು ; (ವಿವರವಾಗಿ ಸೇವಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ಈ ಸಂಸ್ಥೆಯಲ್ಲಿ ಇಲ್ಲಿಯುವರೆಗೆ ನೋಂದಾಯಿಸಿ (EMPLAMENT) ಕೊಂಡಿರುವ NGO/FIRM ಹಾಗೂ ಸಂಸ್ಥೆಗಳಾವುವು ; ಇವುಗಳು ನೀಡುವ ಸೇವೆಗಳಿಗೆ ಸಂಸ್ಥೆ ನೀಡುವ ಸೇವಾ ಶುಲ್ಕವೆಷ್ಟು ? (ವಿವರವಾದ ಮಾಹಿತಿ ಒದಗಿಸುವುದು)



## ಕೋವಿಡ್–೧೯ ರೋಗಿಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦ (೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೋರೋನಾ–೧೯ ವೈರಸ್ ಅವಾಂತರ ಹೆಚ್ಚಾಗಿದ್ದು, ಜನರು ಭಯಭೀತರಾಗಿ ಕಾಲ ಕಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಈ ರೋಗಕ್ಕೆ ತುತ್ತಾದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಈ ರೋಗದಿಂದ ಚಿಕಿತ್ಸೆ ಪಡೆದು ಗುಣಮುಖರಾದವರ ಸಂಖ್ಯೆ ಎಷ್ಟು ; ಹಾಗೂ ಮರಣ ಹೊಂದಿದವರ ಸಂಖ್ಯೆ ಎಷ್ಟು ;

(ಈ) ಈ ರೋಗಕ್ಕೆ ತುತ್ತಾದವರಿಗೆ ಕೊಡುವ ಚಿಕಿತ್ಸೆಯ ಪದ್ಧತಿಯೇನು ; (ಮಾಹಿತಿ ಒದಗಿಸುವುದು)

(ಉ) ಬೆಳಗಾವಿ ಜಿಲ್ಲೆಯ ಆಸ್ಪತ್ರೆಗಳಲ್ಲಿ ಈ ರೋಗದ ಚಿಕಿತ್ಸೆಗಾಗಿ ತೆಗೆದುಕೊಂಡ ಕ್ರಮಗಳೇನು ?

## ಆನ್‌ಲೈನ್ ಶಿಕ್ಷಣ ಹಾಗೂ ಶಾಲಾ ಕಾಲೇಜು ತೆರೆಯುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧ (೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್-೧೯ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ರೋಗದ ಹಿನ್ನಲೆಯಲ್ಲಿ ಶಾಲಾ ಕಾಲೇಜುಗಳನ್ನು ಮುಚ್ಚಲಾಗಿದ್ದು, ಮಕ್ಕಳ ಶಿಕ್ಷಣಕ್ಕೆ ಸಂಬಂಧಿಸಿದಂತೆ ಆನ್‌ಲೈನ್ ತರಗತಿಯನ್ನು ಸರ್ಕಾರದ ಸೂಚನೆಯಂತೆ ನಡೆಸಲಾಗುತ್ತಿದ್ದು, ಈ ಶಿಕ್ಷಣವು ಮಕ್ಕಳ ಬೌಧಿಕ ಬೆಳವಣಿಗೆಗೆ ಪೂರಕವಾಗಿದೆಯೇ ;

(ಆ) ಸದರಿ ಆನ್‌ಲೈನ್ ಶಿಕ್ಷಣವನ್ನು ಯಾವ ತರಗತಿಯಿಂದ ಪ್ರಾರಂಭ ಮಾಡಲಾಗಿದೆ ;

(ಇ) ಸದರಿ ಶಿಕ್ಷಣ ವ್ಯವಸ್ಥೆಯಿಂದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ನಡುವಿನ ಬಾಂಧವ್ಯವನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದೇ ;

(ಈ) ಶಾಲೆಗಳನ್ನು ಪ್ರಾರಂಭ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ;

(ಉ) ಶಾಲೆಗಳನ್ನು ಪ್ರಾರಂಭ ಮಾಡುವುದಿದ್ದಲ್ಲಿ ಮಕ್ಕಳು ಹಾಗೂ ಶಿಕ್ಷಕರಿಗೆ ಸ್ಯಾನಿಟೈಸರ್ ಮತ್ತು ಮಾಸ್ಕ್ ಬಳಕೆ ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಶಾಲೆಗಳನ್ನು ನಡೆಸುವ ಬಗ್ಗೆ ಸರ್ಕಾರ ಯಾವ ರೀತಿ ಮಾರ್ಗಸೂಚಿಗಳನ್ನು ಹಾಕಿಕೊಂಡಿದೆ ?

## ರಾಜ್ಯದಲ್ಲಿನ ಸ್ಟಾರ್ಟಪ್ ಸಂಸ್ಥೆಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೨ (೬೧) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-



(ಅ) ಸರ್ಕಾರದಿಂದ ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಎಷ್ಟು ಸ್ಟಾರ್ಟಪ್ ಸಂಸ್ಥೆಗಳಿಗೆ ಸಹಾಯಧನ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡಲಾಗಿದೆ; (ವಿವರ ನೀಡುವುದು)

(ಆ) ಇಲ್ಲಿಯವರೆಗೆ ಕರ್ನಾಟಕ ರಾಜ್ಯ ನಿವಾಸಿಗಳ ಎಷ್ಟು ಸ್ಟಾರ್ಟಪ್ ಸಂಸ್ಥೆಗಳಿಗೆ ಸಹಾಯಧನ ನೀಡಲಾಗಿದೆ;

(ಇ) ಸದರಿ ಸ್ಟಾರ್ಟಪ್ ಸಂಸ್ಥೆಗಳಿಂದ ಸ್ಥಳೀಯರಿಗೆ ಒದಗಿಸಲಾದ ಉದ್ಯೋಗಗಳ ಸಂಖ್ಯೆ ಎಷ್ಟು; ಎಲಿವೇಟೆಡ್ ೧೦೦ ಯೋಜನೆಯಡಿ ಕಳೆದ ೧೦ ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ನೀಡಿರುವ ಅನುದಾನವೆಷ್ಟು?

## ಬೆಂಗಳೂರು ಮತ್ತು ಮೈಸೂರು ವಿಭಾಗದ ಮುಖ್ಯ ಶಿಕ್ಷಕರಿಗೆ ೨೦ ವರ್ಷಗಳ ಕಾಲಮಿತಿ ಬಡ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೩೩ (೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬೆಂಗಳೂರು ಮತ್ತು ಮೈಸೂರು ವಿಭಾಗದ ಮುಖ್ಯ ಶಿಕ್ಷಕರಿಗೆ ೨೦ ವರ್ಷಗಳ ಕಾಲಮಿತಿ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಾಲಮಿತಿ ಬಡ್ತಿ ನೀಡಲು ವಿಳಂಬಯಾಗಿರುವುದಕ್ಕೆ ಕಾರಣಗಳೇನು ; (ವಿವರಗಳ್ಳು ಒದಗಿಸುವುದು)

(ಇ) ಯಾವ ಕಾಲಮಿತಿಯಲ್ಲಿ ಸದರಿ ಬಡ್ತಿ ನೀಡಲಾಗುವುದು ?

## ವಿಶ್ವವಿದ್ಯಾನಿಲಯಗಳ ಸಹಾಯಕ ಪ್ರಾಧ್ಯಾಪಕರ ಬ್ಯಾಕ್‌ಲಾಗ್ ಹುದ್ದೆ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೪ (೪೭) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಇರುವ ಮಾನದಂಡಗಳೇನು;

(ಇ) ಇದುವರೆವಿಗೂ ಸದರಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು;

(ಈ) ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು?

## ದೈಹಿಕ ಶಿಕ್ಷಕರ ಹುದ್ದೆಗಳ ಸೃಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೫ (೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ/ಅನುದಾನಿತ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳನ್ನು ಸೃಜಿಸಲು ಇರುವ ಮಾನದಂಡಗಳೇನು; (ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)



(ಆ) ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; (ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳನ್ನು ದೀರ್ಘ ಕಾಲದಿಂದ ಭರ್ತಿ ಮಾಡದಿರಲು ಕಾರಣಗಳೇನು;

(ಈ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು?

## ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯೋಪಾಧ್ಯಾಯರ/ತತ್ಸಮಾನ ವೃಂದದವರಿಗೆ ಬಡ್ತಿಯಲ್ಲಿ ನಿಯಮ ಪಾಲನೆ ಆಗದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೬ (೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯೋಪಾಧ್ಯಾಯರ/ತತ್ಸಮಾನ ಹುದ್ದೆಗಳಿಗೆ ಬಡ್ತಿ ನೀಡುವಲ್ಲಿ ಶೇಕಡ ೭೫ ರಷ್ಟು ಬಡ್ತಿ ಹಾಗೂ ಶೇಕಡ ೨೫ ರಷ್ಟು ನೇರ ನೇಮಕಾತಿ ನಿಯಮ ಪಾಲನೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪಾಲನೆ ಆಗದಿರುವುದಕ್ಕೆ ಕಾರಣಗಳೇನು ; (ವಿವರಗಳನ್ನು ಒದಗಿಸುವುದು)

(ಇ) ನಿಯಮಾನುಸಾರ ಯಾವ ಕಾಲಮಿತಿಯಲ್ಲಿ ಸದರಿ ಸಮಸ್ಯೆಯನ್ನು ಪರಿಹರಿಸಲಾಗುವುದು ?

## ಹಿಂದಿ ವಿಷಯ ಪರಿವೀಕ್ಷಕರ ಹುದ್ದೆಗಳ ಸೃಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೭ (೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢಶಾಲಾ ವಿಭಾಗದ ಯಾವ ಯಾವ ವಿಷಯಗಳಲ್ಲಿ ವಿಷಯ ಪರಿವೀಕ್ಷಕರ (ಸಬ್ಜೆಕ್ಟ್ ಇನ್ಸ್‌ಪೆಕ್ಟರ್) ಹುದ್ದೆಗಳನ್ನು ಸೃಜಿಸಲಾಗಿದೆ ; (ವಿಷಯವಾರು ವಿವರಗಳನ್ನು ಒದಗಿಸುವುದು)

(ಆ) ಇದುವರೆವಿಗೂ ಹಿಂದಿ ವಿಷಯ ಪರಿವೀಕ್ಷಕರ ಹುದ್ದೆ ಸೃಜಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸದರಿ ಹುದ್ದೆಯನ್ನು ಸೃಜಿಸದಿರಲು ಕಾರಣಗಳೇನು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಸೃಜಿಸಲು ಕ್ರಮ ಕೈಗೊಳ್ಳಲಾಗುವುದು?

## ಪ್ರೌಢಶಾಲಾ ಸಹ ಶಿಕ್ಷಕರಿಗೆ ಬಡ್ತಿ ನೀಡಲು ವಿಳಂಬವಾಗಿರುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೮ (೧೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢಶಾಲೆಗಳ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾಗಿ ಬಡ್ತಿ ನೀಡಿ ಎಷ್ಟು ವರ್ಷಗಳಾಗಿದೆ;

(ಆ) ಬಡ್ತಿಗಾಗಿ ಅರ್ಹರಿರುವ ಸಹ ಶಿಕ್ಷಕರ ಸಂಖ್ಯೆ ಎಷ್ಟು;

(ಇ) ಯಾವ ಕಾಲಮಿತಿಯೊಳಗೆ ಅವರುಗಳಿಗೆ ಬಡ್ತಿ ನೀಡಲಾಗುವುದು? (ಮಾಹಿತಿ ನೀಡುವುದು)



## ಸಂಬಳ ಬಡವಾಡೆಯಲ್ಲಿ ವಿಳಂಬವಾಗಿರುವ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೩೯ (೧೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮಾರ್ಚ್ ೨೦೨೦ರಿಂದ ಲಾಕ್‌ಡೌನ್ ಘೋಷಣೆಯಾದ ನಂತರ ಅನುದಾನರಹಿತ ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಸಂಬಳ ಬಟವಾಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು)

## ವೆಂಟಿಲೇಟರ್ ಖರೀದಿ ಮತ್ತು ಚಾಲನೆ ಕುರಿತು

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೦ (೧೦೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಎಸ್‌ಎನ್‌ಆರ್ ಆಸ್ಪತ್ರೆಯಲ್ಲಿ ಖರೀದಿಸಿರುವ ವೆಂಟಿಲೇಟರ್‌ಗಳ ಸಂಖ್ಯೆ ಎಷ್ಟು; ಅವುಗಳನ್ನು ಅಳವಡಿಸಲಾಗಿದೆಯೇ; (ಮಾಹಿತಿ ನೀಡುವುದು)

(ಆ) ಅಳವಡಿಸಿದ್ದಲ್ಲಿ, ಸದರಿ ಯಂತ್ರಗಳನ್ನು ಚಾಲನೆ ಮಾಡಲು ನುರಿತ ಆಪರೇಟರ್‌ಗಳು ಇದ್ದಾರೆಯೇ; ಇದ್ದಲ್ಲಿ ವಿವರಗಳನ್ನು ನೀಡುವುದು; ಇದಕ್ಕೆ ಭರಿಸಲಾದ ಮೊತ್ತ ಎಷ್ಟು;

(ಇ) ಈ ಆಸ್ಪತ್ರೆಯಲ್ಲಿ ವೆಂಟಿಲೇಟರ್‌ಗೆ ಅವಶ್ಯಕತೆಯುಳ್ಳ ತಿಂಗಳ ಸರಾಸರಿ ರೋಗಿಗಳ ಸಂಖ್ಯೆ ಎಷ್ಟು?

## ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೪೧ (೧೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಮತ್ತು ಅನುದಾನರಹಿತ ಶಾಲಾ ಶಿಕ್ಷಕರಿಗೆ ಕಾಲ್ಪನಿಕ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಯಾವ ಕಾಲಮಿತಿಯೊಳಗೆ ಕಾಲ್ಪನಿಕ ವೇತನ ನೀಡಲಾಗುವುದು? (ಮಾಹಿತಿ ನೀಡುವುದು)

## ವೈದ್ಯರುಗಳಿಗೆ ಇನ್ಸೆಂಟೀವ್ ಹಣವನ್ನು ಮೀಸಲಿಡುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨ (೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯರ ಬೇಡಿಕೆಯಂತೆ ರೂ.೧೨೫ ಕೋಟಿ ಇನ್ಸೆಂಟೀವ್ ಮೀಸಲಿಡಲು ಸರ್ಕಾರವು ಒಪ್ಪಿರುತ್ತದೆಯೇ;

(ಆ) ಸದರಿ ಇನ್ಸೆಂಟೀವ್ ಹಣವನ್ನು ಯಾವ ಯಾವ ಕಾರಣಗಳಿಗೆ ವೆಚ್ಚ ಮಾಡಬೇಕಾಗಿದೆ ಹಾಗೂ ಅದಕ್ಕೆ ನಿಗದಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)



(ಇ) ಸದರಿ ಇನ್ಸೆಂಟೀವ್ ಹಣವನ್ನು ವೈದ್ಯರು ಮುಷ್ಕರ ಹೂಡಿದ ನಂತರ ನಿರ್ಧಾರ ತೆಗೆದುಕೊಳ್ಳಲಾಗಿದೆಯೇ;

(ಈ) ಸಮಯಕ್ಕೆ ಸರಿಯಾಗಿ ವೈದ್ಯರ ಬೇಡಿಕೆಯನ್ನು ಸರ್ಕಾರ ಈಡೇರಿಸದೇ ಇರುವುದರಿಂದ ವೈದ್ಯರು ಮುಷ್ಕರ ಕೈಗೊಳ್ಳಲು ಕಾರಣವಾಯಿತು; ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ವಿವಿಧ ಉದ್ದಿಮೆಗಳಲ್ಲಿ ದುಡಿಯುತ್ತಿರುವ ಕಾರ್ಮಿಕರ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೩ (೫೮) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಉದ್ದಿಮೆಗಳಲ್ಲಿ ದುಡಿಯುತ್ತಿರುವ ಲಕ್ಷಾಂತರ ಕಾರ್ಮಿಕರಿಗೆ ರಾಜ್ಯ ಸರ್ಕಾರ ಕನಿಷ್ಠ ವೇತನ ಹೆಚ್ಚಳ ಮಾಡಿದೆಯೇ; ಮಾಡಿದ್ದಲ್ಲಿ ಶೇಕಡ ಎಷ್ಟು ಪ್ರತಿಶತ ಹೆಚ್ಚಿಸಲಾಗಿದೆ;

(ಆ) ಕಾರ್ಮಿಕರ ಕನಿಷ್ಠ ವೇತನವು ಎಷ್ಟು ಉದ್ದಿಮೆಗಳಿಗೆ ಅನ್ವಯವಾಗುತ್ತದೆ; ಇದನ್ನು ಪ್ರತಿ ಬಾರಿ ಶೇಕಡ ಎಷ್ಟು ಪ್ರತಿಶತ ಹೆಚ್ಚಿಸಲಾಗಿದೆ;

(ಇ) ಕನಿಷ್ಠ ವೇತನವನ್ನು ಹೆಚ್ಚಿಸಲು ಅನುಸರಿಸುವ ಮಾನದಂಡಗಳೇನು;

(ಈ) ಉದ್ಯಮಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿದ್ದು ಕನಿಷ್ಠ ವೇತನ ಜಾರಿಗೊಳಿಸದಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?

## ವಿದ್ಯಾರ್ಥಿಗಳಿಗೆ ಕಾಲೇಜುಗಳಲ್ಲಿ ಕೊರೋನಾ ಸೋಂಕು ಹರಡುತ್ತಿರುವ ಬಗ್ಗೆ.

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೪ (೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ಸಾಲಿನಲ್ಲಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಿದ್ದು, ವಿದ್ಯಾರ್ಥಿಗಳಿಗೆ ಕೊರೋನಾ ಸೋಂಕು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದಲ್ಲಿ, ಇಲ್ಲಿಯವರೆಗೆ ಎಷ್ಟು ವಿದ್ಯಾರ್ಥಿಗಳಿಗೆ ಕೊರೋನಾ ಸೋಂಕು ಹರಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ ಶೇ.೧೦೦% ಇದೆಯೇ; ಇಲ್ಲವಾದಲ್ಲಿ, ಶೇ೧೦೦% ಹಾಜರಾತಿ ಪಡೆಯಲು ಸರ್ಕಾರ ಕೈಗೊಂಡ ಕ್ರಮವೇನು;

(ಇ) ಈ ರೀತಿ ಕೊರೋನಾ ಸೋಂಕು ತಗುಲಿರುವ ವಿದ್ಯಾರ್ಥಿಗಳಿಗೆ ಯಾವ ರೀತಿ ತರಗತಿಗಳನ್ನು ತೆಗೆದುಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ;

(ಈ) ತರಗತಿಗಳಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ;



(ಉ) ಕೊರೋನಾ ಸೋಂಕು ತಡೆಗಟ್ಟಲು ಕಾಲೇಜುಗಳಲ್ಲಿ ಯಾವ ರೀತಿಯ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ; ಹಾಗೂ ಪ್ರಸಕ್ತ ಸಾಲಿನ ಪದವಿ ಕಾಲೇಜುಗಳನ್ನು ಮುಂದೂಡುವ ಬಗ್ಗೆ ಸರ್ಕಾರದ ನೀಲುವೇನು?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫ (೫೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಮತ್ತು ಎಂದಿ ನಿಂದ ಖಾಲಿ ಇವೆ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಯಾವುವು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಸಂವಿಧಾನ ಕಲಂ ೩೭೧(ಜೆ) ಪ್ರಕಾರ ಹೈದರಾಬಾದ್–ಕರ್ನಾಟಕ ಭಾಗದವರಿಗಾಗಿ ಹುದ್ದೆಗಳನ್ನು ಪ್ರತ್ಯೇಕವಾಗಿ ವಿಂಗಡಿಸಲಾಗಿದೆಯೇ? (ವಿಂಗಡಿಸಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು)

## ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣದ ಅನುದಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೬ (೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರೌಢ ಶಿಕ್ಷಣ ಮತ್ತು ಪದವಿಪೂರ್ವ ಶಿಕ್ಷಣಗಳಿಗೆ ಸರ್ಕಾರ ಮಂಜೂರಾತಿ ನೀಡಿದ್ದು, ಇಲ್ಲಿಯವರೆಗೂ ಅನುದಾನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಯಾವ ಕಾಲಮಿತಿಯೊಳಗೆ ಅನುದಾನ ನೀಡಲಾಗುವುದು? (ವಿವರ ನೀಡುವುದು)

## ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಗಳ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೭ (೩೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಹಾಸ್ಟೆಲ್ ಹೀಗೆ ಜಾತಿ ಹೆಸರಿನಲ್ಲಿ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಿದ್ದು ಸರ್ಕಾರದಿಂದಲೇ ಸಮಾಜಕ್ಕೆ ವ್ಯತಿರಿಕ್ತ ಸಂದೇಶ ಕಳುಹಿಸಿದಂತಾಗುತ್ತದೆಂದು ಭಾವಿಸಿ ಸರ್ಕಾರವು ತಾಲ್ಲೂಕಿಗೆ ಒಂದು ಜನರಲ್ ಹಾಸ್ಟೆಲ್ ಸ್ಥಾಪಿಸಲಾಗುವುದೆಂದು ವರದಿಯಾಗಿದ್ದು ನಿಜವೇ;



(ಆ) ಹಾಗಿದ್ದಲ್ಲಿ, ಈ ಹಾಸ್ಟೆಲ್‌ಗಳ ನಿರ್ವಹಣೆಯ ಜವಾಬ್ದಾರಿ ಯಾರಿಗೆ ಇರುತ್ತದೆ;

(ಇ) ಈ ಹಾಸ್ಟೆಲ್‌ಗಳ ಪ್ರವೇಶಾತಿಗಾಗಿ ಅನುಸರಿಸುವ ಮಾನದಂಡಗಳೇನು; ಯಾವ ಆಧಾರದ ಮೇಲೆ ಮತ್ತು ಎಷ್ಟು ಜಾತಿ ಜನರಿಗೆ ಪ್ರವೇಶಾತಿಯನ್ನು ನೀಡಲಾಗುವುದು? (ವಿವರ ನೀಡುವುದು)

## ಅರೆ ಸರ್ಕಾರಿ ನೌಕರರಿಗೆ ವೈದ್ಯಕೀಯ ಸೌಲಭ್ಯಗಳ ಬಗ್ಗೆ.

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೮ (೩೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ನೌಕರರಿಗೆ ವೈದ್ಯಕೀಯ ಸೌಲಭ್ಯ ನೀಡುತ್ತಿದ್ದು ಅರೆ ಸರ್ಕಾರಿ ನೌಕರರಿಗೆ ಸೌಲಭ್ಯ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅವರುಗಳಿಗೆ ಸದರಿ ಸೌಲಭ್ಯ ಕಲ್ಪಿಸಲು ಎಷ್ಟು ಕಾಲಾವಕಾಶ ಬೇಕಾಗುವುದು? (ಸಂಪೂರ್ಣ ವಿವರ ನೀಡುವುದು)

## ಅರಣ್ಯ ಇಲಾಖೆಯಲ್ಲಿ ಅಧಿಕಾರಿ/ನೌಕರರುಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೪೯ (೩೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅರಣ್ಯ ಇಲಾಖೆಯಲ್ಲಿ ಎಷ್ಟು ವಲಯಗಳಿವೆ; ಯಾವ ಯಾವ ವಲಯದಲ್ಲಿ ಎಷ್ಟು ಗಾರ್ಡ್, ಡಿವೈಆರ್‌ಎಫ್‌ಓಗಳು, ಆರ್‌ಎಫ್‌ಓ, ಡಿಎಫ್‌ಓಗಳು, ಸಿಸಿಎಫ್‌ಗಳು, ಪಿಸಿಸಿಎಫ್‌ಗಳು ಕಾರ್ಯ ನಿರ್ವಹಿಸುತ್ತಿದ್ದಾರೆ; (ವಲಯವಾರು ಮಾಹಿತಿ ನೀಡುವುದು)

(ಆ) ಈ ವರ್ಗಗಳ ಜೇಷ್ಠತಾ ಪಟ್ಟಿಯನ್ನು ವಲಯವಾರು ಮಾಡಲಾಗಿದೆಯೇ; ಅಥವಾ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ಮಾಡಲಾಗಿದೆಯೇ; ಅನುಸರಿಸುವ ಮಾನದಂಡಗಳಾವುವು;

(ಇ) ಯಾವುದೇ ವರ್ಗ ಜೇಷ್ಠತಾ ಪಟ್ಟಿ ಅಂತಿಮಗೊಳಿಸಿ ಅಧಿಸೂಚನೆ ಹೊರಡಿಸಿದ ಮೇಲೆ ಜೇಷ್ಠತಾ ಪಟ್ಟಿ ಬದಲಾಯಿಸಲು ಸರ್ಕಾರ ಅಥವಾ ಅಧಿಕಾರಿಗಳಿಗೆ ಕಾನೂನುನಲ್ಲಿ ಅವಕಾಶಗಳಿದೆಯೇ; (ವಿವರ ನೀಡುವುದು)

(ಈ) ಅಧಿಕಾರ ಇಲ್ಲದಿದ್ದರೂ, ಡಿವೈಆರ್‌ಎಫ್‌ಓಗಳ ಜೇಷ್ಠತಾ ಪಟ್ಟಿಯನ್ನು ಬೆಂಗಳೂರು ವಲಯದಲ್ಲಿ ಏತಕ್ಕಾಗಿ ೨ನೇ ಭಾರಿ ಮಾಡಲಾಗಿದೆ; ಅದರಲ್ಲಿ ಕಿರಿಯ ಯಾರನ್ನು ಹಿರಿಯರನ್ನಾಗಿ ಹಿರಿಯರನ್ನು ಕಿರಿತಯನ್ನಾಗಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಸರ್ಕಾರಿ ಮತ್ತು ಅರೆ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೫೦ (೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ಸರ್ಕಾರಿ ಮತ್ತು ಅರೆ ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಬೋಧಕರ ಹುದ್ದೆಗಳನ್ನು ಖಾಲಿ ಆದ ದಿನದಿಂದಲೇ ಭರ್ತಿ ಮಾಡಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಆ) ಖಾಲಿ ಆದ ದಿನದಿಂದಲೇ ಹುದ್ದೆಗಳನ್ನು ತುಂಬಿಕೊಳ್ಳದಿದ್ದಲ್ಲಿ ಮಕ್ಕಳ ಶಿಕ್ಷಣದ ಮಟ್ಟ ಕುಗ್ಗಿ ಹೋಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮವೇನು; ಖಾಲಿ ಹುದ್ದೆಗಳನ್ನು ತುಂಬಲು ಎಷ್ಟು ಕಾಲಾವಕಾಶ ಬೇಕಾಗುತ್ತದೆ? (ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ COVID-19 Warriors ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೧ (೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೋವಿಡ್–೧೯ ತಡೆಗಟ್ಟುವ ಸಮಯದಲ್ಲಿ ಕೋವಿಡ್–೧೯ಗೆ ತುತ್ತಾಗಿ ಮರಣ ಹೊಂದಿದ ಕೋವಿಡ್ ವಾರಿಯರ್ಸ್‌ಗಳ ಸಂಖ್ಯೆ ಎಷ್ಟು;

(ಆ) ಸದರಿಯವರುಗಳ ಕುಟುಂಬಕ್ಕೆ ಸರ್ಕಾರದಿಂದ ಒದಗಿಸಿದ ಸೌಲಭ್ಯಗಳಾವುವು? (ತಾಲ್ಲೂಕುವಾರು ಹೆಸರು ಮತ್ತು ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸರ್ಕಾರ ೨೦೨೦–೨೧ರಲ್ಲಿ ಮೀಸಲಿಟ್ಟಿರುವ ಅನುದಾನ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೨ (೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಆಯವ್ಯಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಮೀಸಲಿರಿಸಿದ ಅನುದಾನ ಎಷ್ಟು;

(ಆ) ಸದರಿ ಅನುದಾನದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಯಾವ ಯಾವ ಕಾಲೇಜಿಗೆ ಎಷ್ಟು ಎಷ್ಟು ಅನುದಾನ ಮೀಸಲಿಡಲಾಗಿದೆ;

(ಇ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪದವಿಪೂರ್ವ ಅನುದಾನಿತ ಶಾಲೆಗಳಲ್ಲಿನ ಎಷ್ಟು ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಅನುಮೋದನೆ ನೀಡಿದೆ? (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಪದವಿಪೂರ್ವ ಶಾಲಾ ಕಾಲೇಜುಗಳ ಹುದ್ದೆಗಳ ಮಾಹಿತಿಯನ್ನು ನೀಡುವುದು)

## ರಾಜ್ಯದಲ್ಲಿ ಎಷ್ಟು ವನ್ಯಧಾಮಗಳಿವೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩ (೬೬) ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವನ್ಯಧಾಮಗಳ ಸಂಖ್ಯೆ ಎಷ್ಟು; ಅವು ಯಾವುವು; ಅವುಗಳ ವಿಸ್ತೀರ್ಣ ಎಷ್ಟು;



(ಆ) ರಾಜ್ಯದಲ್ಲಿ ವನ್ಯಜೀವಿಗಳ ಗಣತಿ ಕಾರ್ಯ ಪೂರ್ಣಗೊಂಡಿದೆಯೇ; ಯಾವ ಯಾವ ವನ್ಯಜೀವಿಗಳು ಎಷ್ಟು ಸಂಖ್ಯೆಯಲ್ಲಿ ಯಾವ ಯಾವ ಅರಣ್ಯ ಪ್ರದೇಶದಲ್ಲಿವೆ; ವನ್ಯ ಜೀವಿ ಗಣತಿ ಕಾರ್ಯ ಪ್ರಾರಂಭವಾಗದಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು;

(ಇ) ವನ್ಯ ಜೀವಿ ಮತ್ತು ಮಾನವರ ಸಂಘರ್ಷ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಮೀಸಲಿಟ್ಟಿರುವ ಅನುದಾನ ಹಿಂಪಡೆದಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪ (೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್–೧೯ರ ಸಮಸ್ಯೆ ಉದ್ಭವಿಸಿರುವ ಹಿನ್ನೆಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣಕ್ಕಾಗಿ ಮೀಸಲಿಟ್ಟಿರುವ ಅನುದಾನವನ್ನು ಕಡಿತಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಅನುದಾನ ಕಡಿತಗೊಳಿಸಲಾಗಿದೆ;

(ಆ) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯಲ್ಲಿ ಅನುದಾನಿತ ಶಾಲಾ ಮತ್ತು ಕಾಲೇಜುಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಹಾಗೂ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಶಿಕ್ಷಣ ಸಂಸ್ಥೆಗಳು ಅಧಿಸೂಚನೆ ಹೊರಡಿಸಿರುವ ಹುದ್ದೆಗಳನ್ನು ಭರ್ತಿ ಮಾಡಿ ಅನುಮೋದನೆಗಾಗಿ ಸಲ್ಲಿಸಿರುವ ಪ್ರಸ್ತಾವನೆ ಮತ್ತು ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಈ ಹಂತದಲ್ಲಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆದರೂ ಸಹ ಕಳೆದ ೬ ತಿಂಗಳುಗಳಿಂದ ವೇತನವಿಲ್ಲದೆ ಶಿಕ್ಷಕರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಜ್ಯದ ಸಾಮಾಜಿಕ ಅರಣ್ಯ ಪ್ರದೇಶದ ವಿಸ್ತೀರ್ಣ ಕುರಿತು

**ಶ್ರೀ ಹೆಚ್.ಎಂ.ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೫ (೩೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾಮಾಜಿಕ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶಗಳಲ್ಲಿ ಬೆಳೆಸಲು ಇರುವ ನರ್ಸರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ನರ್ಸರಿಗಳಲ್ಲಿ ರೈತರಿಗೆ ಸಸಿಗಳನ್ನು ನೀಡುವಲ್ಲಿ ಸರ್ಕಾರದ ಯೋಜನೆಗಳೇನು; (ವಿವರ ನೀಡುವುದು)

(ಇ) ಸಾಮಾಜಿಕ ಅರಣ್ಯ ಇಲಾಖೆಯಿಂದ ಬೆಳೆಸಿರುವ ನೆಡು ತೋಪುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ತಾಲ್ಲೂಕು ವಾರು ವಿವರ ನೀಡುವುದು)

(ಈ) ಸಾಮಾಜಿಕ ಅರಣ್ಯ ನರ್ಸರಿಗಳಲ್ಲಿ ೨೦೧೯–೨೦ ಹಾಗೂ ೨೦೨೦–೨೧ರಲ್ಲಿ ಬೆಳೆಸಿದ ಸಸಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ರೈತರಿಗೆ ವಿತರಿಸಿದ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಉ) ನರ್ಸರಿಗಳಲ್ಲಿ ಸಸಿ ಬೆಳಸಲು ೨೦೧೯–೨೦ ಹಾಗೂ ೨೦೨೦–೨೧ನೇ ಸಾಲಿನಲ್ಲಿ ನಿಗದಿಪಡಿಸಿದ ಅನುದಾನವೆಷ್ಟು; ಖರ್ಚಾದ ಮೊತ್ತವೆಷ್ಟು; ಬಾಕಿ ಉಳಿದ ಅನುದಾನವೆಷ್ಟು; ಹಾಗೂ ಬಾಕಿ ಉಳಿಯಲು ಕಾರಣಗಳೇನು? (ವಿವರ ನೀಡುವುದು)



## ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕೋವಿಡ್–೧೯ ನಿಯಂತ್ರಣ ಕುರಿತು

**ಶ್ರೀ ಹೆಚ್.ಎಂ.ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೬ (೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕೋವಿಡ್–೧೯ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಪ್ರಸಕ್ತ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳಿಗೆ ವ್ಯಯವಾದ ಒಟ್ಟು ಹಣ ಎಷ್ಟು; (ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು)

(ಆ) ಖಾಸಗಿ ಆಸ್ಪತ್ರೆಗಳು ಕೋವಿಡ್ ರೋಗಿಗಳಿಗಾಗಿ ಸರ್ಕಾರ ರೂಪಿಸಿದ ಬೆಲೆಯ ಮಾನದಂಡ ಮೀರಿ ಹೆಚ್ಚು ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ನಿಯಂತ್ರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ರಾಜ್ಯದಲ್ಲಿ ಈವರೆಗೆ ಎಷ್ಟು ಕೋವಿಡ್ ಕಿಟ್‌ಗಳನ್ನು ವಿತರಿಸಲಾಗಿದೆ? (ಅಂಕಿ ಅಂಶಗಳೊಂದಿಗೆ ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ವಿವಿಧ ನಿಗಮ ಮಂಡಳಿಗಳಿಂದ ಕೈಗೊಂಡ ಕಾರ್ಯಕ್ರಮ ಕುರಿತು

**ಶ್ರೀ ಹೆಚ್.ಎಂ.ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೭ (೪೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿವಿಧ ನಿಗಮ ಮಂಡಳಿಗಳಿಂದ ಕೈಗೊಂಡ ವಿವಿಧ ಕಾರ್ಯಕ್ರಮಗಳಾವುವು; ಸದರಿ ಕಾರ್ಯಕ್ರಮಗಳಿಗೆ ಮಂಜೂರಾದ ಅನುದಾನವೆಷ್ಟು; (ವಿವರ ನೀಡುವುದು)

(ಆ) ಬೆಂಗಳೂರು ನಗರದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿವಿಧ ನಿಗಮ ಮಂಡಳಿಗಳಿಂದ ಸರ್ಕಾರ ರೂಪಿಸಿರುವ ಯೋಜನೆಗಳಾವುವು; ಹಾಗೂ ಅವುಗಳಿಗೆ ಅನುದಾನ ನಿಗದಿ ಪಡಿಸಲಾಗಿದೆಯೇ; (ವಿವರ ನೀಡುವುದು)

(ಇ) ವಿವಿಧ ನಿಗಮ ಮಂಡಳಿಗಳಲ್ಲಿ ಹಲವಾರು ಯೋಜನೆಗಳಿಗೆ ಫಲಾನುಭವಿಗಳನ್ನು ಗುರುತಿಸಿ ಸೌಲಭ್ಯ ನೀಡುವಲ್ಲಿ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಶೀಘ್ರ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳ ಕುರಿತು

**ಶ್ರೀ ಹೆಚ್.ಎಂ.ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೫೮ (೪೦) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ. ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಕೈಗೊಂಡ ವಿವಿಧ ಕಾರ್ಯಕ್ರಮಗಳಾವುವು; ಹಾಗೂ ಸದರಿ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; (ವಿವರ ನೀಡುವುದು)



(ಆ) ಬೆಂಗಳೂರು ನಗರದಲ್ಲಿ ಯುವ ಕೌಶಲ್ಯ ಪ್ರತಿಭೆಗಳನ್ನು ಗುರುತಿಸಿ ಬೆಳೆಸುವಲ್ಲಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು; ಹಾಗೂ ಅನುದಾನ ನಿಗದಿ ಪಡಿಸಲಾಗಿದೆಯೇ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ತರಬೇತಿ ಶಾಲೆಗಳನ್ನು ತೆರೆಯಲಾಗಿದೆಯೇ; ಹಾಗಿದ್ದಲ್ಲಿ ಸ್ಥಾಪಿಸಿರುವ ತರಬೇತಿ ಶಾಲೆಗಳ ವಿವರ ನೀಡುವುದು; ಕಳೆದ ೩ ವರ್ಷಗಳಲ್ಲಿ ರಾಜ್ಯದ ಎಲ್ಲ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆದ ತರಬೇತುದಾರರ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಸಕಾಲ ವ್ಯವಸ್ಥೆಯಲ್ಲಿ ಅರ್ಜಿಗಳ ವಿಲೇವಾರಿ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೯ (೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಬಿ.ಬಿ.ಎಂ.ಪಿ ಹಾಗೂ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಕಂದಾಯ ಮತ್ತು ಸರ್ವೆ ಇಲಾಖೆಗಳಿಗೆ ಸಕಾಲ ವ್ಯವಸ್ಥೆಯಡಿ ದಾಖಲಾದ ಅರ್ಜಿಗಳ ಸಂಖ್ಯೆ ಎಷ್ಟು; (ಇಲಾಖೆವಾರು ವಿವರ ನೀಡುವುದು)

(ಆ) ದಾಖಲಿಸಲ್ಪಟ್ಟ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳು ವಿಲೇಯಾಗಿವೆ; ವಿಲೇಗಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ನಿಯಮಿತ ಅವಧಿಯೊಳಗೆ ವಿಲೇ ಮಾಡದೆ ಬಾಕಿ ಇರುವ ಅರ್ಜಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## Online ಶಿಕ್ಷಣ ಮತ್ತು RTE ಶಿಕ್ಷಣದ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೬೦ (೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚೆಗೆ ಕರೋನ ವೈರಾಣು ರೋಗದ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಖಾಸಗಿ ಶಾಲೆಗಳಲ್ಲಿ ಅಂತರ್ಜಾಲ ಮುಖಾಂತರ ಶಿಕ್ಷಣ ನೀಡುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಅಂತರ್ಜಾಲ ಮುಖಾಂತರ ಶಿಕ್ಷಣ ನೀಡುತ್ತಿರುವ ಹಲವು ಖಾಸಗಿ ಶಾಲೆಗಳಲ್ಲಿ ಪ್ರಸಕ್ತ ವರ್ಷದ ಶೈಕ್ಷಣಿಕ ಶುಲ್ಕ ಪಾವತಿ ಮಾಡುವಂತೆ ಮಕ್ಕಳ ಪೋಷಕರಿಗೆ ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ಮಾಹಿತಿ ನೀಡುವುದು)

(ಇ) ಕಳೆದ ೧೦ ವರ್ಷಗಳಿಂದ ಶಿಕ್ಷಣ ಹಕ್ಕು ಕಾಯ್ದೆ (RTE)ಯಡಿಯಲ್ಲಿ ಸರ್ಕಾರದಿಂದ ಖಾಸಗಿ ಶಿಕ್ಷಣ ಶಾಲೆಗಳಿಗೆ ಕೊಡಬೇಕಾಗಿರುವ ಮೊತ್ತವೆಷ್ಟು; (ವರ್ಷವಾರು, ಜಿಲ್ಲೆವಾರು ವಿವರ ನೀಡುವುದು)

(ಈ) ಸರ್ಕಾರದ ಬೊಕ್ಕಸದಿಂದ ಖಾಸಗಿ ಶಾಲೆಗಳಿಗೆ ಪ್ರತಿ ವರ್ಷ ನೀಡುತ್ತಿರುವ ಶುಲ್ಕದ ಮೊತ್ತವನ್ನು ಕಡಿಮೆ ಮಾಡಲು ಪೂರಕ ಕ್ರಮಗಳನ್ನು ಕೈಗೊಳ್ಳುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ? (ವಿವರ ನೀಡುವುದು)



## ಬೀದರ್ ಜಿಲ್ಲೆಯಲ್ಲಿ ನೋಂದಣಿಯಾದ ಕಾರ್ಮಿಕರ ಸಂಖ್ಯೆ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೬೧ (೫೨) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು ನೋಂದಣಿಯಾದ ಕಾರ್ಮಿಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೫ ರಿಂದ ಡಿಸೆಂಬರ್-೧ ೨೦೨೦ ರವರೆಗೆ ನೋಂದಣಿಯಾದ ಕಾರ್ಮಿಕ ಕುಟುಂಬಗಳಿಗೆ ನೀಡಿದ ಸೌಲಭ್ಯಗಳಾವುವು; (ಸಂಪೂರ್ಣ ವಿವರ ನೀಡುವುದು)

(ಇ) ಪರಿಹಾರಕ್ಕಾಗಿ ಕಾರ್ಮಿಕರು ಹಾಕಿದ ಒಟ್ಟು ಅರ್ಜಿಗಳೆಷ್ಟು; ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ; ಬಾಕಿಯಿರುವ ಅರ್ಜಿಗಳೆಷ್ಟು; ಬಾಕಿ ಉಳಿಯಲು ಕಾರಣಗಳೇನು ; (ವಿವರ ನೀಡುವುದು)

(ಈ) ೨೦೧೫ ರಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಗೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ; ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಅನುದಾನ ಬಿಡುಗಡೆಯಾಗಿದೆ ;

(ಉ) ಬಿಡುಗಡೆಯಾಗಿದ್ದಲ್ಲಿ, ಇಲ್ಲಿಯವರೆಗೆ ನೋಂದಣಿಯಾದ ಕಾರ್ಮಿಕ ಕುಟುಂಬಗಳಿಗೆ ಯಾವ ಯಾವ ಸೌಲಭ್ಯಗಳಡಿ ಪ್ರೋತ್ಸಾಹಧನ ನೀಡಲಾಗಿದೆ ; ನೀಡಿದ್ದಲ್ಲಿ ಫಲಾನುಭವಿಗಳವಾರು ನೀಡಿದ ಮೊತ್ತದ ವಿವರ ಮತ್ತು ದಿನಾಂಕ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು ?

## ಜಿಲ್ಲಾ ಕಾರ್ಮಿಕ ಕಚೇರಿಯಲ್ಲಿ ಸುಮಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨ (೧೦೦) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಕಾರ್ಮಿಕ ಇಲಾಖೆಯಲ್ಲಿ ಸರ್ಕಾರಿ/ಗುತ್ತಿಗೆ (ಹೊರಮೂಲ) ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಜಿಲ್ಲಾ ಕಾರ್ಮಿಕ ಕಚೇರಿಯಲ್ಲಿ ಒಂದೇ ಸ್ಥಳದಲ್ಲಿ ಸುಮಾರು ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರೆಷ್ಟು; (ವಿವರ ಒದಗಿಸುವುದು)

(ಇ) ಇಂತಹ ನೌಕರರ ಮೇಲೆ ಸಾರ್ವಜನಿಕರಿಂದ, ಜನ ಪ್ರತಿನಿದಿಗಳಿಂದ ಭ್ರಷ್ಟಾಚಾರ ಮಾಡಿರುವ ಆರೋಪಗಳು ಕೇಳಿ ಬಂದಿದ್ದರೂ ಸಹ ಅವರ ಮೇಲೆ ಯಾವುದೇ ಕ್ರಮಕೈಗೊಳ್ಳದಿರಲು ಕಾರಣಗಳೇನು;

(ಈ) ಇಂತಹ ಹೊರಮೂಲ ಗುತ್ತಿಗೆ/ಅಧಿಕಾರಿ, ಸಿಬ್ಬಂದಿಗಳ ಮೇಲೆ ದೂರುಗಳು ಕೇಳಿಬಂದ ನಂತರವು ಸಹ ಅಂತಹ ಸಿಬ್ಬಂದಿಗಳನ್ನು ಪುನರ್ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಕಚೇರಿಯಲ್ಲಿ ನೇಮಕ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣ ವಿವರ ಒದಗಿಸುವುದು)



## ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆಯ ಕುರಿತು

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩ (೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆ; (ತಾಲ್ಲೂಕುವಾರು ಮತ್ತು ವಿಷಯಗಳವಾರು ವಿವರ ನೀಡುವುದು)

(ಆ) ಪಠ್ಯಕ್ರಮದಲ್ಲಿ ಆಯಾ ವಿಷಯಗಳಲ್ಲಿ ಪರಿಣಿತರಾದ ಶಿಕ್ಷಕರನ್ನು ನೇಮಿಸಲಾಗಿದೆಯೇ; (ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಪ್ರಸಕ್ತ ಮುಖ್ಯೋಪಾಧ್ಯಾಯರು ಅಗತ್ಯಕ್ಕಿಂತ ಅತೀ ಕಡಿಮೆ ಶಿಕ್ಷಕರನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು; ಹಾಗೂ ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಯಚೂರು ವಿಶ್ವವಿದ್ಯಾಲಯದ ಮಾಹಿತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೪ (೭೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನೂತನ ವಿಶ್ವವಿದ್ಯಾಲಯ ಯಾವಾಗ ಪ್ರಾರಂಭವಾಗಿದೆ; ಈ ವಿಶ್ವವಿದ್ಯಾಲಯವು ಸ್ವಂತ ಕಟ್ಟಡವನ್ನು ಹೊಂದಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಆ) ಈ ವಿಶ್ವವಿದ್ಯಾಲಯಕ್ಕೆ ಸರಕಾರದಿಂದ ಮಂಜೂರಾದ ಜಮೀನು ಎಷ್ಟು; ಈ ವಿ.ವಿ. ಯ ವ್ಯಾಪ್ತಿ ಎಷ್ಟು ಹಾಗೂ ಸರಕಾರದಿಂದ ಇನ್ನುಳಿದ ಜಮೀನನ್ನು ಯಾವಾಗ ಒದಗಿಸಲಾಗುವುದು;

(ಇ) ಸದರಿ ವಿಶ್ವವಿದ್ಯಾಲಯದಲ್ಲಿ ಎಲ್ಲಾ ಮೂಲಭೂತ ಸೌಲಭ್ಯಗಳು ಇವೆಯೇ; ಹಾಗಾದರೆ, ಇಲ್ಲಿಯವರೆಗೆ ಸರಕಾರದಿಂದ ಒದಗಿಸಿದ ಅನುದಾನ ಎಷ್ಟು;

(ಈ) ಸದರಿ ವಿಶ್ವವಿದ್ಯಾಲಯದಲ್ಲಿ ಭೋದಕ ಮತ್ತು ಭೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಉ) ಈ ವಿಶ್ವವಿದ್ಯಾಲಯದಲ್ಲಿ ಬೋದಿಸುವ ಸ್ನಾತಕ, ಸ್ನಾತಕೊತ್ತರ ವಿಷಯಗಳು ಯಾವುವು?

## ಕಲ್ಯಾಣ ಕರ್ನಾಟಕ ಭಾಗದ ಅನುದಾನ ರಹಿತ ಶಾಲೆಗಳಿಗೆ ಕೆ.ಕೆ.ಆರ್.ಡಿ ಯಿಂದ ಅನುದಾನ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ):–**

೬೫ (೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಅನುದಾನ ರಹಿತ ಶಾಲೆಗಳಿಗೆ ಕೆ.ಕೆ.ಆರ್.ಡಿ.ಬಿ ಯಿಂದ ಅನುದಾನವನ್ನು ಒದಗಿಸಲಾಗುವುದೇ;

(ಆ) ಅನುದಾನಿತ ಮತ್ತು ಅನುದಾನ ರಹಿತ ಶಾಲಾ, ಕಾಲೇಜುಗಳ ಮೂಲಭೂತ ಸೌಲಭ್ಯಕ್ಕೆ ಅನುದಾನ ನೀಡಲಾಗುವುದೆ;

(ಇ) ಇಲ್ಲವಾದಲ್ಲಿ, ಯಾವ ಕಾರಣಕ್ಕೆ ನೀಡಲಾಗುವುದಿಲ್ಲ; (ವಿವರವಾದ ಮಾಹಿತಿ ನೀಡುವುದು)



(ಈ) ಕೆ.ಕೆ.ಆರ್.ಡಿ.ಬಿ. ಯಿಂದ ಅತಿಥಿ ಶಿಕ್ಷಕರ/ಉಪನ್ಯಾಸಕರಿಗೆ ವೇತನ ನೀಡಲಾಗವುದೇ ?

## ೨೦೦೮ರ ನಂತರ ನೇಮಕಗೊಂಡ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ಎಕ್ಸ್‌ಗ್ರೇಷಿಯಾ ನೀಡುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೬೬ (೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೦೧–೦೮–೨೦೦೮ರ ನಂತರ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ನೇಮಕಗೊಂಡ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ಎಕ್ಸ್‌ಗ್ರೇಷಿಯಾ ನೀಡದಿರುವುದು ನಿಜವೇ;

(ಆ) ನೀಡದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಹಾಗೂ ಈ ಬಗ್ಗೆ ಸರ್ಕಾರದ ನಿಲುವುಗಳೇನು ?

## ಪದೋನ್ನತಿ ಹೊಂದಿದ ಶಿಕ್ಷಕರ/ಉಪನ್ಯಾಸಕರ ವೇತನ ತಾರತಮ್ಯ ಸರಿದೂಗಿಸುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೬೭ (೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರಾಗಿ ಅದೇ ರೀತಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ

ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ಹೊಂದಿ ೧೦, ೧೫, ೨೦ ವರ್ಷಗಳ ಕಾಲಮಿತಿ ಬಡ್ತಿ ಪಡೆಯುವಾಗ ವೇತನ ತಾರತಮ್ಯವಾಗಿ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ತಾರತಮ್ಯ ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೬೮ (೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಕಾರಣಗಳಿಂದ ತೆರವಾದ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯ ಕಾರಣ ನೀಡಿ ನೇಮಕಾತಿಯನ್ನು ತಡೆಹಿಡಿಯುವಂತೆ ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ಪರೀಕ್ಷೆಯ ಫಲಿತಾಂಶಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

(ಈ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಆದೇಶ ಹೊರಡಿಸುವುದು ಯಾವಾಗ ? (ವಿವರ ನೀಡುವುದು)



## ವಿಶ್ವವಿದ್ಯಾನಿಲಯಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೬೯ (೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು;

(ಆ) ಈ ವಿಶ್ವವಿದ್ಯಾನಿಲಯಗಳಲ್ಲಿ ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ? (ವಿವರ ನೀಡುವುದು)

## ಅತಿಥಿ ಉಪನ್ಯಾಸಕರು ಮತ್ತು ಶಿಕ್ಷಕರ ವೇತನ ಬಿಡುಗಡೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೭೦ (೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರೌಢ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು/ ಶಿಕ್ಷಕರುಗಳ ಸಂಖ್ಯೆ ಎಷ್ಟು;

(ಆ) ಇವರಿಗೆ ಮಾರ್ಚ್ ತಿಂಗಳಿನಿಂದ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರಿಗೆ ವೇತನ ನೀಡಿದ ಮಾದರಿಯಲ್ಲಿ ಈ ಶಿಕ್ಷಕರಿಗೆ ವೇತನ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ೧೯೯೫ರ ನಂತರದ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೭೧ (೨೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೫ರ ನಂತರ ಪ್ರಾರಂಭವಾದ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಈ ಶಾಲಾ ಕಾಲೇಜುಗಳಲ್ಲಿ ಕಳೆದ ೨೫ ವರ್ಷಗಳಿಂದ ಸಿಬ್ಬಂದಿಗಳು ಕಡಿಮೆ ವೇತನಕ್ಕೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಇವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ೧೯೯೫ರ ನಂತರ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ವೇತನಾನುದಾನಕ್ಕೆ ಒಳಪಡಿಸಲಾಗುವುದು ಯಾವಾಗ? (ಮಾಹಿತಿ ಒದಗಿಸುವುದು)



## ನಿರುದ್ಯೋಗ ನಿವಾರಣೆಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿಕೆ ಕುರಿತು

**ಡಾ॥ ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೨ (೧೬೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ಸಾಂಕ್ರಾಮಿಕ ರೋಗ ನಿಯಂತ್ರಣಕ್ಕಾಗಿ ವಿಧಿಸಿದ ಲಾಕ್ ಡೌನ್‌ನಿಂದ ಉಂಟಾದ ನಿರುದ್ಯೋಗ ಸಮಸ್ಯೆಯ ನಿವಾರಣೆಗೆ ಸ್ಥಳೀಯ ಉದ್ಯೋಗ ಕಲ್ಪಿಸಲು ಯಾವ ಯಾವ ಕೌಶಲ್ಯ ತರಬೇತಿಗಳನ್ನು ನೀಡಲಾಗಿದೆ;

(ಆ) ಪ್ರಸ್ತುತ ಯಾವ ಯಾವ ಕೌಶಲ್ಯಗಳಿಗೆ ಬೇಡಿಕೆ ಇದೆ ಹಾಗೂ ಉದ್ಯೋಗಾವಕಾಶ ಒದಗಿಸಬಹುದು; ಈ ನಿಟ್ಟಿನಲ್ಲಿ ತರಬೇತಿ ನೀಡಲಾಗುತ್ತಿರುವ ಬಗ್ಗೆ ವಿವರ ನೀಡುವುದು;

(ಇ) ಕೌಶಲ್ಯಾಭಿವೃದ್ಧಿ ತರಬೇತಿ ಪಡೆದವರಿಗೆ ಯಾವ ಯಾವ ಉದ್ಯಮಗಳು ಉದ್ಯೋಗ ನೀಡಬಹುದು ನೀಡಿವೆ ಹಾಗೂ ನೀಡಬೇಕಿದೆ ? (ಕೌಶಲ್ಯಾಭಿವೃದ್ಧಿ ತರಬೇತಿ ಪಡೆದಿರುವವರ ಮಾಹಿತಿ ಹಾಗೂ ಉದ್ಯೋಗಾವಕಾಶ ಪಡೆದವರ ಮಾಹಿತಿ ಒದಗಿಸುವುದು)

## ಆನೆ ಹಾವಳಿ ತಡೆಗೆ ಕೈಗೊಂಡಿರುವ ಮಂಜಾಗ್ರತಾ ಕ್ರಮಗಳ ಕುರಿತು

**ಡಾ: ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೩ (೧೭೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆನೆ ಹಾವಳಿ ನಿಯಂತ್ರಣ ಕುರಿತು ಮಾಹಿತಿ ನೀಡುವುದು;

(ಆ) ಅರಣ್ಯದ ಅಂಚಿಗೆ ಆನೆ ದಾಳಿ ತಡೆಯಲು ರೈಲು ಹಳಿ ಕಂಬಿ ಅಳವಡಿಕೆ ಕಾರ್ಯ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕಿ.ಮೀ ಪೂರ್ಣಗೊಂಡಿದೆ ಇದಕ್ಕೆ ವೆಚ್ಚವಾಗುವ ಅನುದಾನ ಎಷ್ಟು; ಸದರಿ ಅನುದಾನವನ್ನು ಎಲ್ಲಿಂದ ಭರಿಸಲಾಗುವುದು;

(ಇ) ಅರಣ್ಯದಲ್ಲಿ ಕಳೆದ ವರ್ಷ ತಗುಲಿದ ಬೆಂಕಿ ಅನಾಹುತದಲ್ಲಿ ಮೃತ ಪಟ್ಟ ವನ್ಯ ಜೀವಿಗಳು ಯಾವುವು; (ಸಂಖ್ಯಾವಾರು ವಿವರ ಒದಗಿಸುವುದು)

(ಈ) ನಾಶಗೊಂಡ ಅರಣ್ಯ ಪುನರ್ ವೃದ್ಧಿ ಹಾಗೂ ವನ್ಯ ಜೀವಿಗಳಿಗೆ ಸುರಕ್ಷಿತ ಅರಣ್ಯ ಪರಿಸರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೋವಿಡ್–೧೯ ಭಾಧಿತರ ಆರೋಗ್ಯದ ಮೇಲಾಗುತ್ತಿರುವ ಅಡ್ಡ ಪರಿಣಾಮಗಳ ಕುರಿತು ಮಾಹಿತಿ

**ಡಾ॥ ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೪ (೧೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ರಾಜ್ಯದಲ್ಲಿ ಕೋವಿಡ್–೧೯ ಸಾಂಕ್ರಾಮಿಕ ರೋಗದಿಂದ ಬಳಲುತ್ತಿರುವ, ಮೃತಪಟ್ಟವರ, ಹಾಗೂ ಗುಣಮುಖರಾದವರ ಸಂಖ್ಯೆ ಎಷ್ಟು ;

(ಆ) ಕೋವಿಡ್–೧೯ಗೆ ತುತ್ತಾದ ಪುರುಷರು/ಮಹಿಳೆಯರು ಹಾಗೂ ಮಕ್ಕಳ ಪ್ರಮಾಣ ಎಷ್ಟು;

(ಇ) ಗ್ರಾಮೀಣ ಹಾಗೂ ನಗರ ಭಾಗಗಳಲ್ಲಿನ ಭಾಧಿತರ ಸಂಖ್ಯೆ ಎಷ್ಟು;

(ಈ) ಕೋವಿಡ್–೧೯ ರೋಗದಿಂದ ಗುಣಮುಖರಾದವರಲ್ಲಿ ನಂತರ ಉಂಟಾಗಿರುವ ಬಾಧಿಸಲ್ಪಡಬಹುದಾದ ದೈಹಿಕ ತೊಂದರೆ ಬಗ್ಗೆ ಅಧ್ಯಯನ ನಡೆದಿದೆಯೇ; ಇದನ್ನು ತಡೆಯಲು ಅನುಸರಿಸುತ್ತಿರುವ ಕ್ರಮಗಳೇನು?

## ಕಡ್ಡಾಯವಾಗಿ ಕೋವಿಡ್–೧೯ ರಜೆಯಲ್ಲಿರುವ ಮಕ್ಕಳ ಮನೋಬಲ ಅಧ್ಯಯನ ಕುರಿತು

**ಡಾ: ತೇಜಸ್ವಿನಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೭೫ (೧೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ಹಿನ್ನಲೆಯಲ್ಲಿ ಕಡ್ಡಾಯವಾಗಿ ಮುಚ್ಚಲ್ಪಟ್ಟಿರುವ ಶಾಲೆಯಿಂದಾಗಿ ಮನೆಯಲ್ಲಿಯೇ ಇರುವ ಮಕ್ಕಳ ಪೋಷಕರ ಮನೋಬಲ ವೃದ್ಧಿಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಆ) ಪ್ರಸ್ತುತ ಡಿಸೆಂಬರ್ ಹಾಗೂ ಜನವರಿ ತಿಂಗಳುಗಳು ಅತ್ಯಂತ ಶೀತದಾಯಕವಾಗಿದ್ದು, ಕೋವಿಡ್–೧೯ರ ೨ನೇ ಅಲೆಯು

ವೇಗವಾಗಿ ಮಾರಣಾಂತಿಕವಾಗಿ ವ್ಯಾಪ್ತಿಸುತ್ತಿರುವ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಭವಿಷ್ಯದ ಕುರಿತು ಸರ್ಕಾರ ಕೈಗೊಂಡಿರುವ ನಿರ್ಣಯಗಳೇನು;

(ಇ) ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ೧ ರಿಂದ ೯ ತರಗತಿವರೆಗೆ ಉತ್ತೀರ್ಣ ಮಾಡಿ ಶೈಕ್ಷಣಿಕ ಉನ್ನತೀಕರಣ ಸೂಕ್ತವೆನಿಸಿದ್ದರೂ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಗಳಿಗೆ ಕಡ್ಡಾಯವಾಗಿ ತರಬೇತಿ ಹಾಗೂ ಪರೀಕ್ಷೆ ಸೂಕ್ತವಾಗಿದ್ದು ಈ ಬಗ್ಗೆ ಸರ್ಕಾರದ ನಿಲುವೇನು?

## ಸರ್ಕಾರಿ ಉನ್ನತ ಶಿಕ್ಷಣದ ಅವಕಾಶಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೬ (೮೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ ರಿಂದ ೨೦೨೦ನೇ ಸಾಲಿನ ಅವಧಿಯಲ್ಲಿ ರಾಜ್ಯದಲ್ಲಿ ಸರ್ಕಾರಿ ಶಾಲೆಗಳಿಂದ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ನೀಟ್ ಮೂಲಕ ವೈದ್ಯಕೀಯ, ಎಂಜಿನಿಯರಿಂಗ್, ದಂತ ಮುಂತಾದ ಪದವೀಧರ ಕೋರ್ಸ್‌ಗಳಿಗೆ ಬಂದ ಅರ್ಜಿಗಳ ಸಂಖ್ಯೆಯಲ್ಲಿ ಇಳಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ೨೦೧೫–೧೯ರ ಸಾಲಿನ ಅವಧಿಯಲ್ಲಿ ನೀಟ್ ಮೂಲಕ ವೈದ್ಯಕೀಯ ಕಾಲೇಜುಗಳಿಗೆ ಸೇರಿದ ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಇಳಿಕೆಯಾಗಿರುವುದು ನಿಜವೇ; (ವಿವರಗಳನ್ನು ಒದಗಿಸುವುದು)



(ಇ) ಬೋಧನಾ ಶುಲ್ಕವನ್ನು ಮರುಪಾವತಿ ಮಾಡದಿರುವ ಕಾರಣದಿಂದಾಗಿ ವಿಶೇಷವಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ವೈದ್ಯಕೀಯ ಮತ್ತು ಎಂಜಿನಿಯರಿಂಗ್‌ಗೆ ಸೇರ ಬಯಸುವ ವಿದ್ಯಾರ್ಥಿಗಳ ಪ್ರವೇಶದಲ್ಲಿ ತೀವ್ರ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಸರ್ಕಾರಿ ಶಾಲೆಗಳಲ್ಲಿ ಅಭ್ಯಸಿಸುವ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶಗಳನ್ನು ಸುಧಾರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಕಾರ್ಮಿಕ ಕಲ್ಯಾಣ ನಿಧಿ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೭ (೭೩) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಕಲ್ಯಾಣ ನಿಧಿಗೆ ನೋಂದಾಯಿಸುವಲ್ಲಿ ಕಟ್ಟಡ ಕಾರ್ಮಿಕರೆಂದು ವರ್ಗೀಕರಣದಲ್ಲಿ ಮೇಸನರಿ, ಬಡಗಿ, ಪ್ಲಂಬರ್ ಇತರರನ್ನು ಕೈಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇವರನ್ನು ನೋಂದಣಿ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಿಂದ ತುಮಕೂರು ಜಿಲ್ಲೆಯಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಸ್ಥಳೀಯ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆಗಳಿಂದ ಜಮೆಯಾದ ಹಣವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಕಾರ್ಮಿಕ ಆರೋಗ್ಯ ವೆಚ್ಚ ಭರಿಸಲು ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಮಂಜೂರಾಗದೇ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅದಕ್ಕೆ ಕಾರಣಗಳೇನು?

## ಸೂಪರ್ ಕಂಪ್ಯೂಟರಿಂಗ್ ಮಿಷನ್‌ನ ಉದ್ದೇಶಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೮ (೭೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ಸೂಪರ್ ಕಂಪ್ಯೂಟರ್‌ಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಯೋಜನೆಗಳ ಅಡಿ ರಾಜ್ಯ ಸರ್ಕಾರ ಇದುವರೆಗೆ ಕೇಂದ್ರದಿಂದ ಪಡೆದಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸೂಪರ್ ಕಂಪ್ಯೂಟರ್‌ಗಳಿಗಾಗಿ ಅಪ್ಲಿಕೇಷನ್‌ಗಳನ್ನು ಅಭಿವೃದ್ಧಿಪಡಿಸುವ ಕಾರ್ಯವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರಾಜ್ಯದಲ್ಲಿನ ಸರ್ಕಾರೇತರ ಸಂಸ್ಥೆಗಳಿಗೆ ವಹಿಸಲಾಗಿದೆಯೇ; (ಮಾಹಿತಿ ನೀಡುವುದು)

(ಇ) ಈ ಅಪ್ಲಿಕೇಷನ್‌ಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಹೆಚ್ಚಿನ ಕಾರ್ಯಕ್ಷಮತೆ ಕಂಪ್ಯೂಟರಿಂಗ್ ಮತ್ತು ನುರಿತ ಮಾನವ ಸಂಪನ್ಮೂಲವನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)



## ಸೆರೋ ಸಮೀಕ್ಷೆ (Sero Survey) ಮತ್ತು ಕೋವಿಡ್–೧೯ರ ನೈಜ ಪ್ರಕರಣಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೭೯ (೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ಬಾರಿ ಸೆರೋ ಸಮೀಕ್ಷೆ (Sero Survey) ಯನ್ನು ನಡೆಸಲಾಗಿದೆ; (ನಗರವಾರು ಮತ್ತು ಜಿಲ್ಲಾವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಈ ಸೆರೋ ಸಮೀಕ್ಷೆಯಲ್ಲಿ ಕೋವಿಡ್–೧೯ರ ನೈಜ ಪ್ರಕರಣಗಳು ಮತ್ತು ಜನಸಂಖ್ಯೆಯಲ್ಲಿ ಕಂಡು ಬಂದಿರುವ ಸೋಂಕುಗಳ ನಡುವೆ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಪ್ರಕರಣಗಳ ನಡುವಿನ ಶೇಕಡಾವಾರು ವ್ಯತ್ಯಾಸವೆಷ್ಟು;

(ಇ) ರಾಜ್ಯ ಸರ್ಕಾರ ನಗರ ಪ್ರದೇಶಗಳಲ್ಲಿ ಮತ್ತು ವಿವಿಧ ಜಿಲ್ಲೆಗಳಲ್ಲಿ ನಡೆಸುತ್ತಿರುವ ವಿವಿಧ ರೀತಿಯ ಕೊರೋನಾ ಪರೀಕ್ಷೆಗಳು ಯಾವುವು ; ಇದುವರೆಗೂ ಎಷ್ಟು ಪರೀಕ್ಷೆಗಳನ್ನು ಮಾಡಲಾಗಿದೆ; ಈ ಕುರಿತು ಸರ್ಕಾರ ವ್ಯಯಿಸಿರುವ ವೆಚ್ಚವೆಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರವು ಅನುಸರಿಸುತ್ತಿರುವ ಪರೀಕ್ಷೆ ಕಾರ್ಯವಿಧಾನವು ದೋಷಪೂರಿತವಾಗಿದ್ದು, ಅಂತಹ ಅನೇಕ ಸಾಂಕ್ರಾಮಿಕ ಪ್ರಕರಣಗಳು ವರದಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಸರ್ಕಾರವು ಸಾರ್ವಜನಿಕರನ್ನು ಅವರ ಇಚ್ಚೆ ಮೇರೆಗೆ ಪರೀಕ್ಷಿಸುವ ಪ್ರಕ್ರಿಯೆಯನ್ನು ಕೈಗೊಂಡಿದೆಯೇ? (ಮಾಹಿತಿ ಒದಗಿಸುವುದು)

## ಆಶಾ ಕಾರ್ಯಕರ್ತೆಯರ ಗೌರವಧನ ಮತ್ತು ಪ್ರೋತ್ಸಾಹಧನ ನೀಡುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೮೦ (೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ನಿಮಿತ್ತ ಕರ್ತವ್ಯ ನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯರಿಗೆ ಗೌರವಧನದ ಜೊತೆಗೆ ಹೆಚ್ಚಿನ ಪ್ರೋತ್ಸಾಹಧನವನ್ನೇನಾದರೂ ನೀಡಲಾಗುತ್ತಿದೆಯೇ; (ವಿವರಗಳನ್ನು ನೀಡುವುದು)

(ಆ) ಆಶಾ ಕಾರ್ಯಕರ್ತೆಯರಿಗೆ ಪ್ರತಿ ತಿಂಗಳು ಸಕಾಲಕ್ಕೆ ಗೌರವಧನ ನೀಡಲಾಗುತ್ತಿದೆಯೇ; (ಮಾಹಿತಿ ಒದಗಿಸುವುದು)

(ಇ) ಕೋವಿಡ್–೧೯ ಕರ್ತವ್ಯದ ಅವಧಿಯಲ್ಲಿ ಆಶಾ ಕಾರ್ಯಕರ್ತೆಯರು ಸಾವನ್ನಪ್ಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಮಂದಿ ಕಾರ್ಯಕರ್ತೆಯರು ಸಾವಿಗೀಡಾಗಿದ್ದಾರೆ (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೋವಿಡ್–೧೯ ವಿರುದ್ಧ ಹೋರಾಡುವ ಆರೋಗ್ಯ ಕಾರ್ಯಕರ್ತರಿಗೆ ಪ್ರಧಾನ್ ಮಂತ್ರಿ ಗರೀಬ್ ಕಲ್ಯಾಣ್ ಪ್ಯಾಕೇಜ್ ಅಡಿಯಲ್ಲಿ, ಎಷ್ಟು ಸಂಖ್ಯೆಯ ವಿಮಾ ಯೋಜನೆಯ ಹಕ್ಕುಗಳನ್ನು ಸಲ್ಲಿಸಲಾಗಿದೆ ಮತ್ತು ಎಷ್ಟು ಸಂಖ್ಯೆಯ ಹಕ್ಕುಗಳು ನಿರ್ಧರಿತಗೊಂಡಿವೆ;



(ಉ) ವೈದ್ಯರು ಮತ್ತು ಆಶಾ ಕಾರ್ಯಕರ್ತೆಯರಿಗೆ ನೀಡಬಹುದಾದ ೨೦೨೦ರ ಅಕ್ಟೋಬರ್‌ನಲ್ಲಿ ಮುಕ್ತಾಯಗೊಳ್ಳಲಿದ್ದ ವಿಮೆಯನ್ನು ವಿಸ್ತರಿಸಲಾಗಿದೆಯೇ? (ವಿವರಗಳನ್ನು ಒದಗಿಸುವುದು)

## ಕೊಡಗು ಜಿಲ್ಲೆಯಲ್ಲಿನ ಟ್ಯಾಕ್ಸಿ ಹಾಗೂ ಆಟೋ ಚಾಲಕರಿಗೆ ಕೋವಿಡ್ ಪರಿಹಾರ ಧನ ನೀಡುವ ಬಗ್ಗೆ

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧ (೯೭) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕೋವಿಡ್ ಪರಿಹಾರ ಧನ ನೀಡುವಂತೆ ಕೋರಿ ಇದುವರೆಗೂ ಎಷ್ಟು ಜನ ಟ್ಯಾಕ್ಸಿ ಹಾಗೂ ಆಟೋ ಚಾಲಕರು ಅರ್ಜಿಯನ್ನು ಸಲ್ಲಿಸಿರುತ್ತಾರೆ;

(ಆ) ಆ ಪೈಕಿ ಎಷ್ಟು ಜನ ಟ್ಯಾಕ್ಸಿ ಹಾಗೂ ಆಟೋ ಚಾಲಕರಿಗೆ ಪರಿಹಾರ ಧನ ವಿತರಣೆ ಮಾಡಲಾಗಿದೆ;

(ಇ) ಪರಿಹಾರ ಕೋರಿ ಅರ್ಜಿ ಸಲ್ಲಿಸಿರುವ ಬಹುತೇಕ ಅರ್ಹ ಫಲಾನುಭವಿಗಳ ಖಾತೆಗೆ ಇದುವರೆಗೂ ಪರಿಹಾರ ಹಣ ಜಮೆಯಾಗದೇ ಇರಲು ಕಾರಣಗಳೇನು;

(ಈ) ಇದುವರೆಗೂ ಜಿಲ್ಲೆಯಲ್ಲಿ ವಿತರಿಸಿರುವ ಪರಿಹಾರ ಧನದ ಮೊತ್ತವೆಷ್ಟು; ಹಾಗೂ ವಿತರಿಸಲು ಬಾಕಿ ಇರುವ ಪರಿಹಾರ ಧನದ ಮೊತ್ತವೆಷ್ಟು;

(ಉ) ಯಾವ ಕಾಲಮಿತಿಯೊಳಗೆ ಅರ್ಹ ಫಲಾನುಭವಿಗಳ ಖಾತೆಗೆ ಸದರಿ ಪರಿಹಾರದ ಹಣವನ್ನು ಜಮೆ ಮಾಡಲಾಗುವುದು?

## ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸರ್ಕಾರಿ ಆಸ್ಪತ್ರೆಯ ಹೆಚ್ಚುವರಿ ಕಟ್ಟಡ ನಿರ್ಮಾಣ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨ (೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಸರ್ಕಾರಿ ಆಸ್ಪತ್ರೆಯ ಹೆಚ್ಚುವರಿ ಕಟ್ಟಡವನ್ನು ನಿರ್ಮಿಸಲು ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ ;

(ಆ) ಸದರಿ ಕಟ್ಟಡ ಕಾಮಗಾರಿಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಬಿಡುಗಡೆಯಾಗಿದ್ದಲ್ಲಿ, ಇದುವರೆಗೂ ಎಷ್ಟು ಹಣ ಬಿಡುಗಡೆಯಾಗಿದೆ;

(ಇ) ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯುನ್ನು ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು?

## ಕೊಡಗು ಜಿಲ್ಲೆಯಲ್ಲಿನ ಕೋವಿಡ್ ಚಿಕಿತ್ಸೆ ಕೇಂದ್ರಗಳ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩ (೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಕೋವಿಡ್ ಚಿಕಿತ್ಸಾ ಕೇಂದ್ರಗಳನ್ನು ತೆರೆಯಲಾಗಿದೆ; ಪ್ರತಿ ಕೇಂದ್ರಕ್ಕೆ ಒದಗಿಸಿರುವ ಸೌಲಭ್ಯಗಳು, ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ವಿವರಗಳನ್ನು ಒದಗಿಸುವುದು;



(ಆ) ಜಿಲ್ಲೆಯಲ್ಲಿ ಇದುವರೆಗೂ ಕೋವಿಡ್ ಸೋಂಕಿಗೆ ತುತ್ತಾದವರ ಸಂಖ್ಯೆ ಎಷ್ಟು; ಇವರಲ್ಲಿ ಸಂಪೂರ್ಣ ಗುಣಮುಖರಾದವರು ಹಾಗೂ ಮೃತರಾದವರ ಸಂಖ್ಯೆ ಎಷ್ಟು;

(ಇ) ಜಿಲ್ಲೆಯಲ್ಲಿ ಕೋವಿಡ್ ಸೋಂಕಿಗೆ ಪ್ರಸ್ತುತ ಚಿಕಿತ್ಸೆ ಪಡೆಯುತ್ತಿರುವವರ ಸಂಖ್ಯೆ ಎಷ್ಟು ;

(ಈ) ಕೋವಿಡ್ ಸೋಂಕಿತರಿಗಾಗಿ ಕೊಡಗು ಜಿಲ್ಲೆಯಲ್ಲಿ ಇಲ್ಲಿಯವರೆಗೂ ಖರ್ಚು ಮಾಡಿರುವ ಹಣ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ನಿರ್ಮಿಸುತ್ತಿರುವ ರೈಲ್ವೆ ಕಂಬಿಗಳ ತಡೆಬೇಲಿ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪ (೯೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕಿನ ವಾಲ್ನೂರು, ತ್ಯಾಗತ್ತೂರು, ಅಭ್ಯತ್ ಮಂಗಲ ಭಾಗದಲ್ಲಿ ಕಾಡಾನೆಗಳ ಹಾವಳಿ ತಡೆಯಲು ರೈಲ್ವೆ ಕಂಬಿಗಳಿಂದ ತಡೆಬೇಲಿ ನಿರ್ಮಿಸಲಾಗುತ್ತಿದೆಯೇ ;

(ಆ) ನಿರ್ಮಿಸುತ್ತಿದ್ದಲ್ಲಿ, ಸದರಿ ಕಾಮಗಾರಿಯ ಅಂದಾಜು ಮೊತ್ತ ಎಷ್ಟು; ಬಿಡುಗಡೆಯಾಗಿರುವ ಹಾಗೂ ವಿನಿಯೋಗಿಸಿರುವ ಅನುದಾನವೆಷ್ಟು ;

(ಇ) ಕಾಮಗಾರಿಯ ಪ್ರಗತಿಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಈ) ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

## ಕೊಡಗು ಜಿಲ್ಲೆಯ ವಿರಾಜಪೇಟೆ ತಾಲ್ಲೂಕಿನ ಆನೆ ಚೌಕೂರು ಸಾಕಾನೆ ಶಿಬಿರದ ಸ್ಥಳಾಂತರ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫ (೬೯) ಮಾನ್ಯ ಅರಣ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ, ವಿರಾಜಪೇಟೆ ತಾಲ್ಲೂಕಿನ ಆನೆ ಚೌಕೂರು ಸಾಕಾನೆ ಶಿಬಿರವನ್ನು ಸ್ಥಳಾಂತರಿಸಬೇಕೆನ್ನುವ ಒತ್ತಾಯ ಸ್ಥಳೀಯರಿಂದ ಸತತವಾಗಿ ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಸಾಕಾನೆ ಶಿಬಿರವನ್ನು ಇದುವರೆವಿಗೂ ಸ್ಥಳಾಂತರಿಸದಿರಲು ಕಾರಣಗಳೇನು;

(ಇ) ಯಾವ ಕಾಲಮಿತಿಯೊಳಗೆ ಆನೆ ಚೌಕೂರು ಸಾಕಾನೆ ಶಿಬಿರವನ್ನು ಸ್ಥಳಾಂತರಿಸಲಾಗುವುದು?

## ಸರ್ಕಾರಿ ಶಾಲೆಗಳಲ್ಲಿ ಪ್ರಧಾನ ಮಂತ್ರಿ ಜಲಜೀವನ್ ಅಭಿಯಾನದ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶಿತ) :–**

೮೬ (೧೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಪ್ರಧಾನ ಮಂತ್ರಿ ಜಲ ಜೀವನ್ ಅಭಿಯಾನದಡಿ ರಾಜ್ಯದ ಸರ್ಕಾರಿ ಶಾಲೆಗಳಿಗೆ ಕುಡಿಯುವ ನೀರು, ಶೌಚಾಲಯ ಮತ್ತು ನೀರಿನ ಟ್ಯಾಂಕ್ ನಿರ್ಮಾಣ ಮಾಡಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಾಗಿ ಇದುವರೆಗೆ ಕೇಂದ್ರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; ಎಷ್ಟು ಅನುದಾನವನ್ನು ಬಳಕೆ ಮಾಡಲಾಗಿದೆ?

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳು ಆಫ್‌ಲೈನ್‌ನಲ್ಲಿ ಕಾರ್ಯನಿರ್ವಹಿಸದೇ ಶುಲ್ಕ ವಸೂಲಿ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೮೭ (೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಹಿನ್ನೆಲೆಯಲ್ಲಿ, ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳು ಆಫ್‌ಲೈನ್‌ನಲ್ಲಿ ಕಾರ್ಯನಿರ್ವಹಿಸದೇ ಇದ್ದರೂ ಪೋಷಕರಿಂದ ಪ್ರತಿ ವರ್ಷದಂತೆ ಶಿಕ್ಷಣ ಶುಲ್ಕವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಶಿಕ್ಷಣ ಶುಲ್ಕವನ್ನು ಅರ್ಧದಷ್ಟು ಕಡಿತಗೊಳಿಸುವ ಬಗ್ಗೆ ಕೈಗೊಂಡ ಕ್ರಮಗಳೇನು?

## ಎಸ್.ಎಸ್.ಎಲ್.ಸಿ.ಯ SC/ST ವಿದ್ಯಾರ್ಥಿಗಳಿಗೆ ಟ್ಯಾಬ್ ವಿತರಿಸುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೮೮ (೫೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ಹಿನ್ನೆಲೆಯಲ್ಲಿ, ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಆನ್‌ಲೈನ್ ಶಿಕ್ಷಣಕ್ಕೆ ಬೇಕಾದ ಟ್ಯಾಬ್ ಇಲ್ಲದೆ ಪಾಠ ಪ್ರವಚನಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಟ್ಯಾಬ್‌ಗಳನ್ನು ಪೂರೈಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ?

## ಸರ್ಕಾರಿ ಕಛೇರಿಗಳ ವೆಬ್‌ಸೈಟ್ ನಿರ್ವಹಣೆ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೮೯ (೧೮೩) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಇಲಾಖೆಯ ವೆಬ್‌ಸೈಟ್‌ಗಳ ನಿರ್ವಹಣೆಯನ್ನು ಯಾವ ಸಂಸ್ಥೆ ನಿರ್ವಹಿಸುತ್ತಿದೆ;

(ಆ) ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಇಲಾಖೆಯ ವೆಬ್‌ಸೈಟ್‌ಗಳು ಆಯಾ ಸಂದರ್ಭಕ್ಕೆ ತಕ್ಕಂತೆ ಅಪ್‌ಡೇಟ್ ಆಗದೆ ಹಳೆಯ ಮಾಹಿತಿಯನ್ನೇ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇತ್ತೀಚಿನ ದಿನಗಳಲ್ಲಿ ಇಲಾಖೆಗಳಲ್ಲಿ ಸಾಮಾಜಿಕ ಜಾಲತಾಣಗಳಾದ ಟ್ವಿಟರ್, ಇನ್ಸ್‌ಟಾಗ್ರಾಂ, ವಾಟ್ಸಾಪ್ ಮತ್ತು ಫೇಸ್‌ಬುಕ್ ಬಳಕೆಯ ಮೂಲಕ ಕಾಗದ ರಹಿತ ಆಡಳಿತವನ್ನು ಸುಗಮಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು;



(ಈ) ಸರ್ಕಾರಿ ಕಛೇರಿಗಳಲ್ಲಿ ಇ–ಆಡಳಿತ ವ್ಯವಸ್ಥೆಯಿದ್ದು ಸರ್ವರ್ ಸಮಸ್ಯೆಯಿಂದ ಸದರಿ ವ್ಯವಸ್ಥೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕೋವಿಡ್ ಲಸಿಕೆಯ ವಿತರಣೆ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦ (೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಕ್ಕೆ ಕೋವಿಡ್ ಲಸಿಕೆ ದೊರೆಯುವುದು ಖಚಿತವಾಗಿದೆಯೇ;

(ಆ) ಕೋವಿಡ್ ಲಸಿಕೆ ವಿತರಣೆಗೆ ಸರ್ಕಾರವು ಯಾವ ಯಾವ ಸಿದ್ದತೆಗಳನ್ನು ಮಾಡಿಕೊಂಡಿದೆ;

(ಇ) ಕೋವಿಡ್ ಲಸಿಕೆಯನ್ನು ಎಲ್ಲಾ ಜಿಲ್ಲೆಗಳಿಗೂ ವಿತರಣೆ ಮಾಡಲಾಗುತ್ತದೆಯೇ?

## ಬಡ ಮಕ್ಕಳಿಗೆ ಟ್ಯಾಬ್ ವಿತರಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೯೧ (೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಶೈಕ್ಷಣಿಕ ಸಾಲಿನಲ್ಲಿ ಕರೋನಾ ಖಾಯಿಲೆಯ ಕಾರಣದಿಂದ ಆನ್‌ಲೈನ್ ಶಿಕ್ಷಣ ನೀಡುತ್ತಿದ್ದು ಬಡ ಮಕ್ಕಳಿಗೆ ಟ್ಯಾಬ್ ವಿತರಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳಾವುವು;

(ಆ) ಬಡ ಮಕ್ಕಳಿಗೆ ಸಂಘ ಸಂಸ್ಥೆಗಳು ಉಚಿತ ಟ್ಯಾಬ್ ವಿತರಿಸಿದರೂ ಸದರಿ ಟ್ಯಾಬ್‌ಗಳಿಗೆ ಪ್ರತಿ ತಿಂಗಳು ನೆಟ್‌ವರ್ಕ್‌ಗಾಗಿ ಹಣ ನೀಡಬೇಕಾಗಿದ್ದು, ಈ ಕುರಿತು ಉಚಿತ ನೆಟ್‌ವರ್ಕ್ ನೀಡುವ ಬಗ್ಗೆ ಸರ್ಕಾರದ ನಿಲುವೇನು;

(ಇ) ಆನ್‌ಲೈನ್ ಶಿಕ್ಷಣ ಕೇವಲ ಉಳ್ಳವರ ಶ್ರೀಮಂತರ ಮಕ್ಕಳಿಗೆ ಮಾತ್ರವೇ ಅನುಕೂಲಕರವಾಗಿದ್ದು ಬಡ ಮಕ್ಕಳಿಗೆ ಸಹಾಯ ಮಾಡುವ ರೀತಿಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳಾವುವು; ಅನ್‌ಲೈನ್ ಶಿಕ್ಷಣದ ಕಾರಣಕ್ಕಾಗಿ ಕಡ್ಡಾಯ ಶಿಕ್ಷಣದಿಂದ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು?

## ವನ್ಯಜೀವಿಗಳ ಗಣತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨ (೯೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವನ್ಯಜೀವಿಗಳ ಗಣತಿ ಕಾರ್ಯವಾಗಿದೆಯೇ; ಯಾವ ಯಾವ ವನ್ಯ ಜೀವಿಗಳು ಎಷ್ಟು ಸಂಖ್ಯೆಯಲ್ಲಿ ಯಾವ ಅರಣ್ಯ ಪ್ರದೇಶದಲ್ಲಿ ಇವೆ; ವನ್ಯ ಜೀವಿ ಗಣತಿ ಕಾರ್ಯ ಪ್ರಾರಂಭವಾಗದಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು;

(ಆ) ವನ್ಯಜೀವಿ ಮತ್ತು ಮಾನವರ ಸಂಘರ್ಷ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳಾವುವು;

(ಇ) ಕಳೆದ ಒಂದು ವರ್ಷದಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಮೃತರಾದವರ ಸಂಖ್ಯೆ ಎಷ್ಟು;



(ಈ) ಕಳೆದ ಒಂದು ವರ್ಷದಲ್ಲಿ ನಾಡಿಗೆ ಬಂದ ಎಷ್ಟು ಕಾಡು ಪ್ರಾಣಿಗಳನ್ನು ರಕ್ಷಿಸಲಾಗಿದೆ; ಯಾವ ಯಾವ ಕಾಡು ಪ್ರಾಣಿಗಳನ್ನು ರಕ್ಷಿಸಿ ಪುರ್ನವಸತಿ ಕಲ್ಪಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಇತರ ಧರ್ಮದಲ್ಲಿರುವ ಪರಿಶಿಷ್ಟ ಪಂಗಡದವರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩ (೯೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಟ ಪಂಗಡದವರು ಯಾವುದೇ ಧರ್ಮಕ್ಕೆ ಸೇರಿದರೂ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ ಎಂಬುದಾಗಿ ಸರ್ಕಾರದ ನಿಲುವಿದ್ದು, ಈ ಸಂಬಂಧ ಪರಿಶಿಷ್ಟ ಪಂಗಡದವರು ಯಾವ ಯಾವ ಧರ್ಮದಲ್ಲಿ ಇದ್ದಾರೆ; (ಧರ್ಮವಾರು ಶೇಕಡವಾರು ಮಾಹಿತಿಯನ್ನು ನೀಡುವುದು)

(ಆ) ಹಿಂದೂ ಧರ್ಮವನ್ನು ಹೊರತುಪಡಿಸಿ ಇತರ ಧರ್ಮದಲ್ಲಿರುವ ಎಷ್ಟು ಪರಿಶಿಷ್ಟ ಪಂಗಡದವರು ಮೀಸಲಾತಿ ಸೌಲಭ್ಯವನ್ನು ಪಡೆದುಕೊಂಡಿರುತ್ತಾರೆ; (ಕಳೆದ ೫ ವರ್ಷಗಳ ಮಾಹಿತಿ ನೀಡುವುದು)

(ಇ) ಸಂವಿಧಾನದ ಆಶಯದಂತೆ ಹಿಂದೂ ಧರ್ಮದ ಪರಿಶಿಷ್ಟ ಪಂಗಡದವರು ಮಾತ್ರವೇ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹರೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ಹಿಂದೂ ಧರ್ಮವನ್ನು ಹೊರತುಪಡಿಸಿ ಇತರ ಧರ್ಮಗಳಲ್ಲಿ ಪರಿಶಿಷ್ಟ ಪಂಗಡದ ಯಾವ ರೀತಿಯ ಜಾತಿ ಪ್ರಕಾರಗಳು ಇವೆ? (ಮಾಹಿತಿ ನೀಡುವುದು)

## ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ೪೧೩.೦೮ ಕೋಟಿ ನಷ್ಟದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪ (೯೪) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಆದಾಯ ತೆರಿಗೆ ಕಾಯ್ದೆಯ ಕಲಂ ೧೨ರ ಅನ್ವಯ ದತ್ತಿ ಸಂಸ್ಥೆ ಎಂದು ನೋಂದಣಿ ಮಾಡಿದ ಬಳಿಕ ದತ್ತಿ ಸಂಸ್ಥೆಯು ಆದಾಯ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸದಿರಲು ಕಾರಣವೇನು;

(ಆ) ಆದಾಯ ತೆರಿಗೆ ಇಲಾಖೆಯಿಂದ ೪೧೩.೦೮ ಕೋಟಿ ತೆರಿಗೆ ಬಾಕಿ ಬಗ್ಗೆ ನೋಟೀಸ್ ಬಂದ ಬಳಿಕ ಆದಾಯ ತೆರಿಗೆ ಕಾಯ್ದೆಯನ್ವಯ ೩೦ ದಿನಗಳ ಒಳಗಾಗಿ ಮೇಲ್ಮನವಿ ಸಲ್ಲಿಸದಿರಲು ಕಾರಣವೇನು;

(ಇ) ತೆರಿಗೆ ಬಾಕಿ ಇದೆ ಎಂಬ ನೋಟೀಸ್ ಬಂದ ೬ ತಿಂಗಳ ಬಳಿಕ ದಿ:೨೮/೦೮/೨೦೧೮ರಂದು ಆದಾಯ ತೆರಿಗೆ ಕಾಯ್ದೆ ಕಲಂ ೧೦(೪೬) ಅಡಿಯಲ್ಲಿ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸಿರುವುದು ತೀವ್ರತರವಾದ ಕರ್ತವ್ಯ ನಿರ್ಲಕ್ಷ್ಯವಲ್ಲವೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ತೆರಿಗೆ ಬಾಕಿ ಬಗ್ಗೆ ನೋಟೀಸ್ ಬಂದ ೬ ತಿಂಗಳವರೆಗೂ ಸದರಿ ನೋಟಿಸಿನ ಮೇಲೆ ಯಾವುದೇ ಕ್ರಮ ಕೈಗೊಳ್ಳದೆ, ಸರ್ಕಾರದ ಗಮನಕ್ಕೂ ತಾರದೆ ನೋಟೀಸನ್ನು ಮುಚ್ಚಿಟ್ಟು ಮಂಡಳಿಗೆ ಆರ್ಥಿಕ



ನಷ್ಟ ಮಾಡಲು ಯತ್ನಿಸಿ ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳನ್ನು ಅಮಾನತ್ತು ಮಾಡದಿರಲು ಕಾರಣವೇನು?

## ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಭಾಷಾ ಅಲ್ಪ ಸಂಖ್ಯಾತ ಸ್ಥಾನಮಾನ ಕುರಿತು.

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫ (೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಭಾಷಾ ಅಲ್ಪ ಸಂಖ್ಯಾತ/ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳ ಕುರಿತು ವ್ಯಾಖ್ಯಾನವೇನು; ಧಾರ್ಮಿಕ ಅಲ್ಪಸಂಖ್ಯಾತ/ಭಾಷಾ ಅಲ್ಪ ಸಂಖ್ಯಾತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರ ನೀಡುತ್ತಿರುವ ರಿಯಾಯಿತಿಗಳಾವುವು; ಈ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರದ ರೀತಿಯಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಭಾಷಾ ಅಲ್ಪ ಸಂಖ್ಯಾತ/ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ ಆಯಾಯ ಭಾಷೆಯ/ಧರ್ಮದ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ ೫೦% ಇದ್ದರೆ ಮಾತ್ರ ಅಂತಹ ಶಿಕ್ಷಣ ಸಂಸ್ಥೆಗಳನ್ನು ಭಾಷಾ/ಧಾರ್ಮಿಕ ಅಲ್ಪ ಸಂಖ್ಯಾತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಎಂದು ಪರಿಗಣಿಸುವ ಬಗ್ಗೆ ಸರ್ಕಾರದ ನಿಲುವೇನು;

(ಇ) ಭಾಷಾ ಅಲ್ಪ ಸಂಖ್ಯಾತ/ಧಾರ್ಮಿಕ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಸರ್ಕಾರಕ್ಕೆ ಎಷ್ಟು ವೈದ್ಯಕೀಯ ಸೀಟುಗಳನ್ನು ಬಿಟ್ಟುಕೊಡುತ್ತಿವೆ; (ಕಾಲೇಜುವಾರು ಮಾಹಿತಿ ನೀಡುವುದು)

(ಈ) ಬಡ ಮತ್ತು ಪ್ರತಿಭಾವಂತ ಮಕ್ಕಳು ವೈದ್ಯಕೀಯ ಶಿಕ್ಷಣ ಪಡೆಯಲು ಅನುವಾಗುವಂತೆ ಸರ್ಕಾರಕ್ಕೆ ವೈದ್ಯಕೀಯ ಮತ್ತು ಉನ್ನತ ವೈದ್ಯಕೀಯ ಶಿಕ್ಷಣದ ಸೀಟುಗಳನ್ನು ಬಿಟ್ಟುಕೊಡದಿರುವ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ರದ್ದುಪಡಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳಾವುವು ಹಾಗೂ ಈ ಕುರಿತು ಸರ್ಕಾರದ ನಿಲುವೇನು?

## ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬ (೧೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಬೋಧಕ/ ಬೋಧಕೇತರ ಮತ್ತು ತಾಂತ್ರಿಕ ಹುದ್ದೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಹುದ್ದೆವಾರು ವಿವರ ಒದಗಿಸುವುದು)

(ಆ) ಈ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಿ, ಮೈಸೂರು ವಿಶ್ವವಿದ್ಯಾನಿಲಯವನ್ನು ದೇಶದಲ್ಲೇ ಅತ್ಯುತ್ತಮ ವಿಶ್ವವಿದ್ಯಾನಿಲಯವನ್ನಾಗಿ ರೂಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;



(ಇ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ವಿಶ್ವವಿದ್ಯಾನಿಲಯಕ್ಕೆ ಕೇಂದ್ರ ಸರ್ಕಾರದಿಂದ ಮಂಜೂರಾಗಿ ಬಂದಿರುವ ಅನುದಾನ ಎಷ್ಟು; ಈ ಅನುದಾನವನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ? (ವಿವರ ಒದಗಿಸುವುದು)

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಅರಣ್ಯ ಹಕ್ಕು ಕಾಯಿದೆ ಜಾರಿ ಕುರಿತು.

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭ (೧೮೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಅರಣ್ಯ ಹಕ್ಕು ಕಾಯ್ದೆ ಜಾರಿ ಅಡಿಯಲ್ಲಿ ಗಿರಿಜನ ಮತ್ತು ಬುಡಕಟ್ಟು ಜನರಿಂದ ಇದುವರೆಗೆ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ವಿಲೇವಾರಿಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಆ) ಆದಿವಾಸಿಗಳ ಅರಣ್ಯ ಹಕ್ಕು ಮಾನ್ಯತಾ ಕಾಯ್ದೆಯನ್ನು ಸೂಕ್ತವಾಗಿ ಜಾರಿಗೆ ತರುವ ಮೂಲಕ ಈ ಅರ್ಜಿಗಳನ್ನು ಪರಿಶೀಲಿಸಿ ವಿಲೇವಾರಿ ಮಾಡಲು ಕ್ರಮ ಜರುಗಿಸಲಾಗುವುದೇ ಈ ಬಗ್ಗೆ ಗಿರಿಜನ ಕಲ್ಯಾಣ ಇಲಾಖೆ, ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ಏರ್ಪಡಿಸಿ, ಅರ್ಜಿಗಳ ವಿಲೇವಾರಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ನಂಜನಗೂಡು ತಾಲ್ಲೂಕು ಹಿಮ್ಮಾವು ಬಳಿ ಇರುವ ಏಷಿಯನ್ ಪೇಂಟ್ಸ್ ಕಾರ್ಖಾನೆಯಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡುವ ಬಗ್ಗೆ

**ಶ್ರೀ ಎಸ್. ನಾಗರಾಜ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮ (೧೦೬) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಂಜನಗೂಡು ತಾಲ್ಲೂಕು ಹಿಮ್ಮಾವು ಬಳಿ ಇರುವ ಏಷಿಯನ್ ಪೇಂಟ್ಸ್ ಕಾರ್ಖಾನೆಯ ಸ್ಥಾಪನೆಗೆ ಭೂಮಿಯನ್ನು ನೀಡಿದ್ದ ಸುಮಾರು ೬೩ ರೈತಾಪಿ ಕುಟುಂಬಗಳಿಗೆ, ಕಾರ್ಖಾನೆಯವರು ಕುಟುಂಬಕ್ಕೆ ಒಂದು ಉದ್ಯೋಗ ಒದಗಿಸುವ ಭರವಸೆಯನ್ನು ನೀಡಲಾಗುತ್ತಿದೆಯೇ; ನೀಡಿದ್ದಲ್ಲಿ ಎಷ್ಟು ಕುಟುಂಬಗಳ ಸದಸ್ಯರಿಗೆ ಇದುವರೆಗೆ ಉದ್ಯೋಗ ಒದಗಿಸಲಾಗಿದೆ; (ವಿವರ ಒದಗಿಸುವುದು)

(ಆ) ಇದುವರೆಗೆ ಭೂಮಿಯನ್ನು ಕಳೆದುಕೊಂಡ ರೈತ ಕುಟುಂಬಗಳಿಗೆ ಉದ್ಯೋಗ ಒದಗಿಸದಿರಲು ಕಾರಣವೇನು; ಈ ಬಗ್ಗೆ ಕಾರ್ಮಿಕ ಇಲಾಖೆ, ಉದ್ಯೋಗ ಮತ್ತು ತರಬೇತಿ ಇಲಾಖೆಯ ಉನ್ನತ ಅಧಿಕಾರಿಗಳು, ಜಿಲ್ಲಾಧಿಕಾರಿಯವರು, ರೈತರ ಪ್ರತಿನಿಧಿಗಳ ಮತ್ತು ಕಾರ್ಖಾನೆಯವರ ಜೊತೆ ಸಭೆ ನಡೆಸಿ ಈ ಸಮಸ್ಯೆಗೆ ಪರಿಹಾರ ಕಂಡುಕೊಂಡು ರೈತಾಪಿ ಮಕ್ಕಳಿಗೆ ಉದ್ಯೋಗ ಒದಗಿಸಲು ಕ್ರಮ ಜರುಗಿಸಲಾಗುವುದೇ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 083/400 ಪ್ರತಿಗಳು/02–12–2020